ಸಂಪುಟ : 11 ಸಂಚಿಕೆ: 134 ಪುಟ : 4+2 ಬೆಲೆ: 3.00 ರವಿವಾರ ಜೂನ್ 28 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 134 Pages : 4+2 Price : 3.00 Sunday june 28 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಎಚ್.ಕೆ. ಪಾಟೀಲರಿಗೆ ಸಚಿವ ಸ್ಥಾನ ನೀಡಲು ನವಲೂರ ಆಗ್ರಹ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಹಿರಿಯ ಶಾಸಕ ಹಾಗೂ ಅನುಭವಿ ರಾಜಕಾರಣಿಯಾಗಿರುವ ಡಾ. ಎಚ್.ಕೆ. ಪಾಟೀಲ ಅವರಿಗೆ ಸಚಿವ ಸಂಪುಟ ವಿಸ್ತರಣೆಯಲ್ಲಿ ಪ್ರಮುಖ ಖಾತೆಯೊಂದಿಗೆ ಸಚಿವ ಸ್ಥಾನ ನೀಡಬೇಕು ಎಂದು ಕಟ್ಟಡ ಕಾರ್ಮಿಕರ ಮಹಾಸಂಘದ ಮಾಜಿ ಅಧ್ಯಕ್ಷ ಹಾಗೂ ಎಐಟಿಸಿಯು ಗದಗ ಜಿಲ್ಲಾಧ್ಯಕ್ಷ ಕರ್ನಾಟಕ ರಾಜ್ಯ ಉಪಾಧ್ಯಕ್ಷ ಎಂ.ಐ. ನವಲೂರ ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಎಚ್.ಕೆ. ಪಾಟೀಲ ಅವರು ಹಲವು ದಶಕಗಳಿಂದ ಶಾಸಕರಾಗಿ ನೀರಾವರಿ, ಗ್ರಾಮೀಣಾಭಿವೃದ್ಧಿ, ಪಂಚಾಯತ್‌ರಾಜ್, ಕಾನೂನು ಹಾಗೂ ಸಂಸದೀಯ ವ್ಯವಹಾರಗಳಂತಹ ಮಹತ್ವದ ಇಲಾಖೆಗಳಲ್ಲಿ ಜನಪರ ಆಡಳಿತ ನೀಡಿರುವ ಅನುಭವಿ ನಾಯಕರು ಎಂದು ಹೇಳಿದ್ದಾರೆ.

ಉತ್ತರ ಕರ್ನಾಟಕದ ಪರ ಧ್ವನಿಯಾಗಿ ರೈತರ ಹಿತಾಸಕ್ತಿಗಾಗಿ ಅನೇಕ ಯೋಜನೆಗಳನ್ನು ಜಾರಿಗೆ ತರುವಲ್ಲಿ ಅವರು ಪ್ರಮುಖ ಪಾತ್ರ ವಹಿಸಿದ್ದಾರೆ. ದೀನ ದಲಿತರು, ಅಲ್ಪಸಂಖ್ಯಾತರು ಸೇರಿದಂತೆ ಸಮಾಜದ ಎಲ್ಲ ವರ್ಗಗಳ ಅಭಿವೃದ್ಧಿಗೆ ಶ್ರಮಿಸಿರುವ ಎಚ್.ಕೆ. ಪಾಟೀಲ ಅವರು ಪ್ರಾಮಾಣಿಕ ಹಾಗೂ ಜನಪರ ರಾಜಕಾರಣಿಯಾಗಿ ಗುರುತಿಸಿಕೊಂಡಿದ್ದಾರೆ ಎಂದು ತಿಳಿಸಿದ್ದಾರೆ.

ಹೀಗಾಗಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಹಾಗೂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಸಚಿವ ಸಂಪುಟ ವಿಸ್ತರಣೆಯಲ್ಲಿ ಎಚ್.ಕೆ. ಪಾಟೀಲ ಅವರಿಗೆ ಪ್ರಮುಖ ಖಾತೆಯೊಂದಿಗೆ ಸಚಿವ ಸ್ಥಾನ ನೀಡಿ, ಉತ್ತರ ಕರ್ನಾಟಕಕ್ಕೆ ಸಮರ್ಪಕ ಪ್ರಾತಿನಿಧ್ಯ ಕಲ್ಪಿಸಬೇಕು ಎಂದು ನವಲೂರ ಒತ್ತಾಯಿಸಿದ್ದಾರೆ.

### ರೋಣ ತಾಲೂಕಿನ ಮಾರನಬಸರಿ ಗ್ರಾಮದಲ್ಲಿ ಮೊಹರಂ ವೇಳೆ ಸಾಂಕೇತಿಕ ರಾಜಕೀಯ ಸಂದೇಶ– ಮುಂಗಾರು ದುರ್ಬಲ, ಹಿಂಗಾರು ಸ್ವಲ್ಪ ಉತ್ತಮದ ಭವಿಷ್ಯವಾಣಿ!

# ಕಮಲದ ಬಳಿಕ ಹಸ್ತ..!



■ವಿಜಯಸಾಕ್ಷಿ ಸುದ್ದಿ, ರೋಣ

ಐತಿಹಾಸಿಕ ಮೊಹರಂ ಆಚರಣೆಗೆ ಹೆಸರುವಾಸಿಯಾದ ರೋಣ ತಾಲೂಕಿನ ಮಾರನಬಸರಿ ಗ್ರಾಮದಲ್ಲಿ ಅಲ್ಲೈದೇವರು ನುಡಿದ ಭವಿಷ್ಯವಾಣಿ ಈ ಬಾರಿ ರಾಜಕೀಯ ಹಾಗೂ ಮಳೆಯ ಕುರಿತ ಚರ್ಚೆಗೆ ಕಾರಣವಾಗಿದೆ. ಸಹಸ್ರಾರು ಭಕ್ತರ ಸಮ್ಮುಖದಲ್ಲಿ ನಡೆದ ಮೊಹರಂ ಆಚರಣೆ ಶಾಂತಿಯುತವಾಗಿ ಸಂಪನ್ನಗೊಂಡಿತು.

ಮೊಹರಂ ಹಬ್ಬದ ಕೊನೆಯ ದಿನ ದೇವರು ಹೊಳೆಗೆ ತೆರಳುವ ವೇಳೆ ಗ್ರಾಮದ ಎರಡು ಮಸೀದಿಗಳ ಅಲ್ಲೈದೇವರುಗಳು ಸಾಂಕೇತಿಕವಾಗಿ ಭವಿಷ್ಯ ನುಡಿದವು. ಸಣ್ಣ ಮಸೀದಿಯ ದೊಡ್ಡದೇವರು ಕಮಲದ ಚಿಹ್ನೆ ಪ್ರದರ್ಶಿಸಿದರೆ, ದೊಡ್ಡ ಮಸೀದಿಯ ದೊಡ್ಡದೇವರು ಮೊದಲು ಕಮಲ, ಬಳಿಕ ಹಸ್ತದ ಚಿಹ್ನೆ ತೋರಿಸಿ ಉತ್ತತ್ತಿ ಎಸೆದಿರುವುದು ಭಕ್ತರಲ್ಲಿ ಕುತೂಹಲ ಮೂಡಿಸಿತು.

ಗ್ರಾಮದ ಹಿರಿಯರ ಪ್ರಕಾರ, ಮಾರನಬಸರಿಯ ಅಲ್ಲೈದೇವರುಗಳು ಈ ಹಿಂದೆ ನುಡಿದ ಹಲವು ರಾಜಕೀಯ ಭವಿಷ್ಯಗಳು ನಿಜವಾಗಿವೆ ಎಂಬ ನಂಬಿಕೆ ಇದೆ. ಈ ಬಾರಿ ನೀಡಿದ ಸಂಕೇತಗಳನ್ನು ಭಕ್ತರು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಎಚ್ಚರಿಕೆಯಿಂದ ಆಡಳಿತ ನಡೆಸಬೇಕೆಂಬ ಸಂದೇಶವೆಂದು ವಿಶ್ಲೇಷಿಸುತ್ತಿದ್ದಾರೆ.

ಇದೇ ವೇಳೆ, ಈ ವರ್ಷದ ಮುಂಗಾರು ಮಳೆ ಕಡಿಮೆ ಪ್ರಮಾಣದಲ್ಲಿ ಸುರಿಯಲಿದ್ದು, ಹಿಂಗಾರು ಸ್ವಲ್ಪ ಉತ್ತಮವಾಗಲಿದೆ ಎಂದು ಅಲ್ಲೈದೇವರು ಭವಿಷ್ಯ ನುಡಿದವು. ಜನರು ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು. ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ತೀವ್ರವಾಗುವುದಿಲ್ಲ ಎಂಬ ಸಂಕೇತವೂ ವ್ಯಕ್ತವಾಯಿತು.

ಮೊಹರಂ ಅಂಗವಾಗಿ ಕತ್ತಲ್ ರಾತ್ರಿ ಹಾಗೂ ದೇವರು ಹೊಳೆಗೆ ತೆರಳುವ ದಿನ ಸಾವಿರಾರು ಭಕ್ತರು ಮಸೀದಿಗಳಿಗೆ ಭೇಟಿ ನೀಡಿ ಸಕ್ಕರೆ ನೈವೇದ್ಯ ಅರ್ಪಿಸಿದರು. ನೂರಾರು ಭಕ್ತರು ದೀಡ ನಮಸ್ಕಾರ, ಉರುಳು ಸೇವೆ ನೆರವೇರಿಸಿ ಹರಕೆ ತೀರಿಸಿದರು. ಮೂರು ದಿನಗಳ ಕಾಲ ಗೀಗಿ ಪದಗಳು, ಧಾರ್ಮಿಕ ಆಚರಣೆಗಳು ಹಾಗೂ ಹಿಂದೂ–ಮುಸ್ಲಿಂ ಸೌಹಾರ್ದದ ವಾತಾವರಣದಲ್ಲಿ ಐತಿಹಾಸಿಕ ಮೊಹರಂ ಹಬ್ಬ ಸಂಪನ್ನಗೊಂಡಿತು.

**ಸಾಂಕೇತಿಕ ಭವಿಷ್ಯವಾಣಿ**

"ಮುಂಗಾರು ಮಳೆ ಕಡಿಮೆ, ಹಿಂಗಾರು ಸ್ವಲ್ಪ ಉತ್ತಮ; ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಎಚ್ಚರಿಕೆಯಿಂದ ಆಡಳಿತ ನಡೆಸಬೇಕು ಎಂಬ ಸಂಕೇತವನ್ನು ಅಲ್ಲೈದೇವರು ನೀಡಿದ್ದಾರೆ ಎಂದು ಭಕ್ತರು ಹಾಗೂ ಗ್ರಾಮದ ಹಿರಿಯರು ವಿಶ್ಲೇಷಿಸಿದರು."






## ಸಿ.ಎ. ಸಾಧನೆಯೊಂದಿಗೆ ಮಿಂಚಿದ ಸ್ವಾತಿ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕೆ.ಎಸ್.ಆರ್.ಟಿ.ಸಿ. ನಿವೃತ್ತ ನಿರ್ವಾಹಕರಾದ ಬಸವರಾಜ ಅಡಿವೆಪ್ಪ ಕರಮುಡಿ ಹಾಗೂ ವಿಜಯಲಕ್ಷ್ಮಿ ಕರಮುಡಿ ದಂಪತಿಯ ಎರಡನೇ ಪುತ್ರಿ ಸ್ವಾತಿ ಬಸವರಾಜ ಕರಮುಡಿ ಅವರು 2026ರ ಜೂನ್‌ನಲ್ಲಿ ನಡೆದ ಸಿ.ಎ. (ಚಾರ್ಟರ್ಡ್ ಅಕೌಂಟೆಂಟ್) ಫೈನಲ್ ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದಾರೆ.

ಸ್ವಾತಿ ಅವರು ಪ್ರಾಥಮಿಕ ಶಿಕ್ಷಣವನ್ನು ವಾಸವಿ ಕನ್ನಡ ಮಾಧ್ಯಮ ಶಾಲೆಯಲ್ಲಿ ಹಾಗೂ ಪ್ರೌಢ ಶಿಕ್ಷಣವನ್ನು ವಿ.ಡಿ.ಎಸ್.ಟಿ.ಸಿ. ಹೆಣ್ಣು ಮಕ್ಕಳ ಶಾಲೆಯಲ್ಲಿ ಪೂರ್ಣಗೊಳಿಸಿದ್ದಾರೆ. ಬಳಿಕ ಜೆ.ಟಿ. ಮಹಾವಿದ್ಯಾಲಯದಲ್ಲಿ ಪಿಯುಸಿ ವಾಣಿಜ್ಯ ವಿಭಾಗದಲ್ಲಿ ಶೇ.99 ಅಂಕಗಳೊಂದಿಗೆ ಕಾಲೇಜಿಗೆ ಪ್ರಥಮ ಸ್ಥಾನ ಪಡೆದಿದ್ದರು. ನಂತರ ಯಾವುದೇ ಕೋಚಿಂಗ್ ಪಡೆಯದೆ ಸಿ.ಎ. ಫೌಂಡೇಶನ್ ಪರೀಕ್ಷೆಯಲ್ಲಿ ಡಿಸ್ಟಿಂಕ್ಷನ್‌ನೊಂದಿಗೆ ಉತ್ತೀರ್ಣರಾಗಿ, ಬೆಂಗಳೂರಿನ ಎಂ.ಸಿ.ಎಸ್. ರಾಘವನ್ ಚಾರ್ಟರ್ಡ್ ಅಕೌಂಟೆಂಟ್ ಸಂಸ್ಥೆಯಲ್ಲಿ ಆರ್ಟಿಕಲ್‌ಶಿಪ್ ತರಬೇತಿ ಪೂರ್ಣಗೊಳಿಸಿ, ಸಹಾಯಕರಾಗಿ ಕಾರ್ಯನಿರ್ವಹಿಸುತ್ತಲೇ ಸಿ.ಎ. ಫೈನಲ್ ಪರೀಕ್ಷೆಯಲ್ಲಿ ಯಶಸ್ಸು ಸಾಧಿಸಿದ್ದಾರೆ.

ಸ್ವಾತಿ ಕರಮುಡಿ ಅವರ ಸಾಧನೆಗೆ ತಂದೆ–ತಾಯಿ, ಕುಟುಂಬಸ್ಥರು, ಬಂಧು–ಬಳಗ, ಸ್ನೇಹಿತರು ಹಾಗೂ ಹಿತೈಷಿಗಳು ಅಭಿನಂದನೆ ಸಲ್ಲಿಸಿದ್ದಾರೆ ಎಂದು ಜಾಗೃತ ನಾಗರಿಕರ ವೇದಿಕೆ ಅಧ್ಯಕ್ಷ ಎಂ.ಎಫ್. ಡೋಣಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕುರ್ತಕೋಟಿ ಸರ್ಕಾರಿ ಶಾಲೆಯಲ್ಲಿ 'ಗಾಳಿಪಟ ಉತ್ಸವ-2026

# ಗಾಳಿಪಟ ಹಾರಿಸಿ ಸಂಭ್ರಮಿಸಿದ ಪುಟಾಣಿಗಳು

■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಕುರ್ತಕೋಟಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ.1ರ ಪೂರ್ವ ಪ್ರಾಥಮಿಕ ವಿಭಾಗದ ಎಲ್‌ಕೆಜಿ ಹಾಗೂ ಯುಕೆಜಿ ಮಕ್ಕಳಿಗಾಗಿ 'ಗಾಳಿಪಟ ಉತ್ಸವ–2026'ನ್ನು ಸಂಭ್ರಮದಿಂದ ಆಯೋಜಿಸಲಾಯಿತು. ಬಣ್ಣ ಬಣ್ಣದ ಹಾಗೂ ವಿವಿಧ ಆಕಾರದ ಗಾಳಿಪಟಗಳನ್ನು ಹಿಡಿದು ಶಾಲೆಯ ಅಂಗಳದಲ್ಲಿ ಪುಟಾಣಿಗಳು ಸಂಭ್ರಮದಿಂದ ಓಡಾಡಿ, ಆಗಸಕ್ಕೆ ಗಾಳಿಪಟ ಹಾರಿಸಿ ಖುಷಿಪಟ್ಟರು.

ಗಾಳಿಪಟ ಹಾರಿಸುವ ವೇಳೆ ಮಕ್ಕಳ ಮುಖದಲ್ಲಿ ಮೂಡಿದ ಸಂತಸ, ಸಂಭ್ರಮ ಹಾಗೂ ಉತ್ಸಾಹ ಎಲ್ಲರ ಗಮನ ಸೆಳೆಯಿತು. ಮಕ್ಕಳ ಕಲರವ ಮತ್ತು ಬಣ್ಣಬಣ್ಣದ ಗಾಳಿಪಟಗಳಿಂದ ಶಾಲೆಯ ವಾತಾವರಣ ಹಬ್ಬದಂತಾಗಿತ್ತು.

ಸರ್ಕಾರಿ ಶಾಲೆಗಳಲ್ಲೂ ಪೂರ್ವ ಪ್ರಾಥಮಿಕ ವಿಭಾಗ ಆರಂಭವಾಗಿರುವ ಹಿನ್ನೆಲೆಯಲ್ಲಿ ಮಕ್ಕಳಲ್ಲಿ ಕಲಿಕೆಯ ಆಸಕ್ತಿ ಬೆಳೆಸುವ ಉದ್ದೇಶದಿಂದ ಇಂತಹ ಸೃಜನಾತ್ಮಕ ಹಾಗೂ ಮನರಂಜನಾ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಖಾಸಗಿ ಶಾಲೆಗಳ ಮಾದರಿಯಲ್ಲಿ ಸರ್ಕಾರಿ ಶಾಲೆಗಳಲ್ಲೂ ಇಂತಹ ಕಾರ್ಯಕ್ರಮಗಳು ನಡೆಯುತ್ತಿರುವುದು ಪಾಲಕರ ಮೆಚ್ಚುಗೆಗೆ ಪಾತ್ರವಾಯಿತು.




**ಕಲಿಕೆಯ ಹೊಸ ಹೆಜ್ಜೆ**

"ಆಟ, ಸೃಜನಶೀಲ ಚಟುವಟಿಕೆ ಮತ್ತು ಅನುಭವಾಧಾರಿತ ಕಲಿಕೆಯಿಂದ ಮಕ್ಕಳಲ್ಲಿ ಆತ್ಮವಿಶ್ವಾಸ ಹಾಗೂ ಕಲಿಕೆಯ ಆಸಕ್ತಿ ಹೆಚ್ಚುತ್ತದೆ."

ಕಾರ್ಯಕ್ರಮವನ್ನು ಪೂರ್ವ ಪ್ರಾಥಮಿಕ ವಿಭಾಗದ ಶಿಕ್ಷಕಿಯರಾದ ಮೀನಾಕ್ಷಿ ಜಕ್ಕಲಿ ಹಾಗೂ ಕಾವ್ಯ ಸಂಕದಾಳ ಆಯೋಜಿಸಿದ್ದರು. ಶಾಲೆಯ ಶಿಕ್ಷಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಆಕಸ್ಮಿಕವಾಗಿ ಶಾಲೆಗೆ ಭೇಟಿ ನೀಡಿದ ಕ್ಷೇತ್ರ ಸಂಪನ್ಮೂಲ ಕೇಂದ್ರದ ಐಇಆರ್‌ಟಿ ಜಿ.ಡಿ. ಮುಳಗುಂದ ಮಕ್ಕಳೊಂದಿಗೆ ಗಾಳಿಪಟ ಹಾರಿಸಿ ಸಂಭ್ರಮದಲ್ಲಿ ಪಾಲ್ಗೊಂಡು ಮಕ್ಕಳನ್ನು ಪ್ರೋತ್ಸಾಹಿಸಿದರು.

# ನಾಡಪ್ರಭು ಕೆಂಪೇಗೌಡ ಜಯಂತಿ ಆಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ನಾಡಪ್ರಭು ಕೆಂಪೇಗೌಡ ಜಯಂತಿಯನ್ನು ಸರಳವಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ನಾಡಪ್ರಭು ಕೆಂಪೇಗೌಡ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಗೌರವ ಅರ್ಪಿಸಲಾಯಿತು.



ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಹಾಗೂ ಜಿಲ್ಲಾ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಡಾ. ಬಸವರಾಜ ಬಳ್ಳಾರಿ, ನಿಕಟ ಪೂರ್ವ ಜಿಲ್ಲಾಧ್ಯಕ್ಷ ಡಾ. ರವಿ ಗುಂಜೀಕರ, ವಾರ್ತಾಧಿಕಾರಿ ವಸಂತ ಮಡ್ಲೂರ, ತಾಪಂ ಇಒ ಶ್ರೀಧರ ಚಿನಗುಂಡಿ, ರಾಜು ಕಂಟಿಗೊನ್ನವರ, ರಾಜು ಸೊಪಡ್ಲ, ನವೀನ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

### 15,500 ಮೀಟರ್ ಎತ್ತರದ ಹರ್ರಾ ಟಾಪ್ ಶಿಖರ ಏರಿದ ಜಕ್ಕಲಿಯ ಪರ್ವತಾರೋಹಕಿ ಸೃಷ್ಟಿ ಮೇಟಿಗೆ ಸನ್ಮಾನಿಸಿದ ಯಾವಗಲ್ಲ

# ಯುವಜನತೆಗೆ ಸೃಷ್ಟಿ ಮೇಟಿ ಮಾದರಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

"ಸಾಧನೆಗೆ ಪುರುಷ–ಮಹಿಳೆ ಎಂಬ ಭೇದವಿಲ್ಲ. ಗುರಿ ಸಾಧಿಸುವ ಛಲ, ಆತ್ಮವಿಶ್ವಾಸ ಮತ್ತು ನಿರಂತರ ಪರಿಶ್ರಮ ಇದ್ದರೆ ಯಾವುದೇ ಶಿಖರವನ್ನೂ ಏರಬಹುದು" ಎಂದು ಮಾಜಿ ಸಚಿವ ಬಿ.ಆರ್. ಯಾವಗಲ್ಲ ಹೇಳಿದರು.

ಸಮೀಪದ ಜಕ್ಕಲಿ ಗ್ರಾಮದ ಯುವ ಪರ್ವತಾರೋಹಕಿ ಸೃಷ್ಟಿ ಮೇಟಿ ಅವರು ಸುಮಾರು 15,500 ಮೀಟರ್ ಎತ್ತರದ ಹರ್ರಾ ಟಾಪ್ ಶಿಖರವನ್ನು ಯಶಸ್ವಿಯಾಗಿ ಏರಿ ಸಾಧನೆ ಮಾಡಿದ ಹಿನ್ನೆಲೆಯಲ್ಲಿ ಅವರ ನಿವಾಸದಲ್ಲಿ ಸನ್ಮಾನಿಸಿ ಅವರು ಮಾತನಾಡಿದರು.



ಸೃಷ್ಟಿ ಅವರ ಸಾಧನೆ ಇಂದಿನ ಯುವಜನತೆಗೆ ಪ್ರೇರಣೆಯಾಗಿದ್ದು, ಗುರಿ ಸಾಧಿಸಲು ಸಮಾಜದ ಬೆಂಬಲವೂ ಅಗತ್ಯವಾಗಿದೆ. ಪರ್ವತಾರೋಹಣದ ಅನುಭವಗಳನ್ನು ದಾಖಲಿಸಿಕೊಳ್ಳುವಂತೆ ಸಲಹೆ ನೀಡಿದರು.

ನಿವೃತ್ತ ಶಿಕ್ಷಕ ಎಂ.ಎಸ್. ಧಡೇಸೂರಮಠ, ಮಾಜಿ ತಾಪಂ ಸದಸ್ಯ ಮಲ್ಲಣ್ಣ ಮೇಟಿ, ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಮಾತನಾಡಿ ಸೃಷ್ಟಿ ಅವರ ಸಾಧನೆಯನ್ನು ಶ್ಲಾಘಿಸಿದರು.

ಸನ್ಮಾನ ಸ್ವೀಕರಿಸಿದ ಸೃಷ್ಟಿ ಮೇಟಿ ಅವರು ಹರ್ರಾ ಟಾಪ್ ಶಿಖರ ಏರಿದ ಅನುಭವ, ತರಬೇತಿ ಹಾಗೂ ಎದುರಾದ ಸವಾಲುಗಳನ್ನು ಹಂಚಿಕೊಂಡರು.

ಕಾರ್ಯಕ್ರಮದಲ್ಲಿ ಉಮೇಶ ಮೇಟಿ, ಹೇಮಾ ಮೇಟಿ, ಮೇಟಿ ಕುಟುಂಬದ ಸದಸ್ಯರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

### ಬೆಟಗೇರಿ–ಗದಗ ನೂತನ ಶಾಖೆ ಉದ್ಘಾಟಿಸಿದ ಮಾಜಿ ಶಾಸಕ ಡಿ.ಆರ್. ಪಾಟೀಲ

# ಆರ್ಥಿಕ ಸಬಲೀಕರಣದಲ್ಲಿ ಗಾಯತ್ರಿ ಸಂಘ ಮುಂಚೂಣಿ

■ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿಯ ಶ್ರೀಗಾಯತ್ರಿ ಪತ್ತಿನ ಸಹಕಾರ ಸಂಘ ನಿಯಮಿತದ ಬೆಟಗೇರಿ–ಗದಗ ಶಾಖೆಯ ನೂತನ ಕಟ್ಟಡವನ್ನು ಮಾಜಿ ಶಾಸಕ ಹಾಗೂ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ನೇಕಾರರ ಶ್ರೇಯೋಭಿವೃದ್ಧಿಗಾಗಿ ಆರಂಭವಾದ ಸಂಘ ಇಂದು ರೈತರು, ಬಡವರು ಹಾಗೂ ವ್ಯಾಪಾರಿಗಳ ಆರ್ಥಿಕ ಸಬಲೀಕರಣದಲ್ಲಿ ಮಹತ್ವದ ಪಾತ್ರ ವಹಿಸಿದೆ. ಠೇವುದಾರರ ವಿಶ್ವಾಸ, ಸಾಲಗಾರರ ಪ್ರಾಮಾಣಿಕತೆ ಹಾಗೂ ಸಿಬ್ಬಂದಿಯ ಕರ್ತವ್ಯನಿಷ್ಠೆಯೇ ಸಂಘದ ಯಶಸ್ಸಿಗೆ ಕಾರಣ ಎಂದರು.




ಲಾಕರ್ ಉದ್ಘಾಟಿಸಿದ ವಿಧಾನಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಸಂಘದ ಬೆಳವಣಿಗೆ ಶ್ಲಾಘನೀಯವಾಗಿದ್ದು, ಸುಮಾರು 40 ಶಾಖೆಗಳ ಮೂಲಕ ₹300 ಕೋಟಿಗೂ ಅಧಿಕ ಠೇವಣಿ ಸಂಗ್ರಹಿಸಿರುವುದು ಜನರ ವಿಶ್ವಾಸದ ಪ್ರತೀಕ ಎಂದರು.

ಮಾಜಿ ಶಾಸಕ ಎಸ್.ಜಿ. ನಂಜಯ್ಯನಮಠ ಕಾರ್ಯಕ್ರಮ ಉದ್ಘಾಟಿಸಿ, ಸಂಸ್ಥಾಪಕ ಅಧ್ಯಕ್ಷ ರವೀಂದ್ರ ಪಿ. ಕಲಬುರ್ಗಿ ಅವರ ಸಮಾಜಮುಖಿ ಸೇವೆಯನ್ನು ಪ್ರಶಂಸಿಸಿದರು.

ಅಧ್ಯಕ್ಷತೆ ವಹಿಸಿದ್ದ ರವೀಂದ್ರ ಕಲಬುರ್ಗಿ ಮಾತನಾಡಿ, ಗ್ರಾಮೀಣ ಜನರ ಆರ್ಥಿಕ ಅಭಿವೃದ್ಧಿಗೆ ಸಂಘ ಇನ್ನಷ್ಟು ಸೇವೆ ಸಲ್ಲಿಸಲಿದೆ ಎಂದರು. ಕಾರ್ಯಕ್ರಮದಲ್ಲಿ ವಿವಿಧ ಗಣ್ಯರನ್ನು ಸನ್ಮಾನಿಸಲಾಯಿತು.

"ರೈತರು, ಬಡವರು ಹಾಗೂ ವ್ಯಾಪಾರಿಗಳಲ್ಲಿ ಆರ್ಥಿಕ ಶಕ್ತಿ ತುಂಬುವಲ್ಲಿ ಶ್ರೀಗಾಯತ್ರಿ ಪತ್ತಿನ ಸಂಘದ ಸೇವೆ ಸಾರ್ಥಕವಾಗಿದೆ."

– ಡಿ.ಆರ್. ಪಾಟೀಲ, ಮಾಜಿ ಶಾಸಕ

## ಸುಜಾತಾ ದೊಡ್ಡಮನಿ ಹುಟ್ಟುಹಬ್ಬ; ರೋಗಿಗಳಿಗೆ ಹಾಲು-ಹಣ್ಣು ವಿತರಣೆ




■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಹಾಗೂ ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಪರಾಜಿತ ಅಭ್ಯರ್ಥಿಯಾಗಿದ್ದ ಸುಜಾತಾ ದೊಡ್ಡಮನಿ ಅವರ ಹುಟ್ಟುಹಬ್ಬದ ಅಂಗವಾಗಿ ಅವರ ಅಭಿಮಾನಿ ಬಳಗದಿಂದ ಶಿರಹಟ್ಟಿ ತಾಲೂಕು ಆಸ್ಪತ್ರೆಯ ರೋಗಿಗಳಿಗೆ ಹಾಲು, ಹಣ್ಣು ಹಾಗೂ ಬ್ರೆಡ್ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡ ಸೋಮನಗೌಡ ಮರಿಗೌಡ್ರ ಮಾತನಾಡಿ, ಸುಜಾತಾ ದೊಡ್ಡಮನಿ ಅವರು ಕ್ಷೇತ್ರದ ಅಭಿವೃದ್ಧಿಗೆ ವಿಶೇಷ ಅನುದಾನಗಳನ್ನು ತಂದು ಜನಸೇವೆಗೆ ಶ್ರಮಿಸುತ್ತಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಅಭಿವೃದ್ಧಿ ಕಾರ್ಯಗಳು ನಡೆಯಲಿವೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಹಾಲಪ್ಪ ದುಗ್ಗಾಣಿ, ಮಲ್ಲಪ್ಪ ಹುಯಿಲಗೋಳ, ಮರಿಯಪ್ಪ ಸಣ್ಣತಂಗಿಯವರ, ಮಾಬುಸಾಬ ಲಕ್ಷ್ಮೇಶ್ವರ, ಮಂಜುನಾಥ ತಳವಾರ, ಮಹದೇವಗೌಡ ಪಾಟೀಲ, ಫಕ್ಕೀರೇಶ ಬಕ್ಕಸದ, ಫಕ್ಕೀರೇಶ ಕಲ್ಯಾಣಿ, ಸಬ್‌ಜಾನಸಾಬ ಲಕ್ಷ್ಮೇಶ್ವರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಗವಾಯಿಗಳ ಜಾತ್ರೆಗೆ ರಾಷ್ಟ್ರಮಟ್ಟದ ಜಂಗಿ ಕುಸ್ತಿಯ ರಂಗು

# ಜು. 6ಕ್ಕೆ ಗದಗದಲ್ಲಿ ರಾಷ್ಟ್ರಮಟ್ಟದ ಜಂಗಿ ಕುಸ್ತಿ

■ವಿಜಯಸಾಕ್ಷಿ ಸುದ್ದಿ, ಗದಗ

ಪರಮಪೂಜ್ಯ ಗಾನಯೋಗಿ ಶಿವಯೋಗಿ ಲಿಂ. ಪಂ. ಪಂಚಾಕ್ಷರಿ ಗವಾಯಿಗಳವರ 82ನೇ ಹಾಗೂ ಪದ್ಮಭೂಷಣ ಲಿಂ. ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳವರ 16ನೇ ಪುಣ್ಯಸ್ಮರಣೋತ್ಸವ ಹಾಗೂ ಉಭಯ ಗುರುಗಳ ಜಾತ್ರಾ ಮಹೋತ್ಸವದ ಅಂಗವಾಗಿ ಜುಲೈ 6ರಂದು ಗದಗದಲ್ಲಿ ರಾಷ್ಟ್ರಮಟ್ಟದ ಜಂಗಿ ನಿಖಾಲಿ ಕುಸ್ತಿ ಪಂದ್ಯಾವಳಿ ಆಯೋಜಿಸಲಾಗಿದೆ.

ಈ ಕುರಿತು ಗದಗ-ಬೆಟಗೇರಿ ಜನರಲ್ ವರ್ಕರ್ಸ್ ಹಮಾಲರು ಹಾಗೂ ಚಕ್ಕಡಿಯವರ ಸಮಿತಿಯ ಕಚೇರಿಯಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಸಮಿತಿಯ ಅಧ್ಯಕ್ಷ ಆದಪ್ಪ ಮಾರೆಪ್ಪನವರ ಮಾತನಾಡಿ, ಗ್ರಾಮೀಣ ಸಂಸ್ಕೃತಿಯ ಪ್ರತೀಕವಾಗಿರುವ ಕುಸ್ತಿ ಕಲೆ ಶಿಸ್ತು, ಧೈರ್ಯ ಮತ್ತು ಆರೋಗ್ಯಕರ ಜೀವನಶೈಲಿಯನ್ನು ಬೆಳೆಸುವ ಪರಂಪರೆಯ ಕ್ರೀಡೆಯಾಗಿದೆ. ಯುವಜನರು ಈ ಕಲೆಯತ್ತ ಆಕರ್ಷಿತರಾಗಬೇಕು ಹಾಗೂ ಗ್ರಾಮೀಣ ಸೊಗಡಿನ ಕುಸ್ತಿ ಪರಂಪರೆಯನ್ನು ಉಳಿಸಿ ಬೆಳೆಸಬೇಕು ಎಂದು ಕರೆ ನೀಡಿದರು.



ಜುಲೈ 5ರಂದು ವಿವಿಧ ರಾಜ್ಯಗಳ ಹೆಸರಾಂತ ಪೈಲ್ವಾನರು ಗದಗಕ್ಕೆ ಆಗಮಿಸಲಿದ್ದು, ಜುಲೈ 6ರಂದು ಮಧ್ಯಾಹ್ನ 3 ಗಂಟೆಗೆ ವೀರೇಶ್ವರ ಪುಣ್ಯಾಶ್ರಮದ ಸಮೀಪದ ಕುಸ್ತಿ ಮೈದಾನದಲ್ಲಿ (ಕೆ.ಎಚ್. ಪಾಟೀಲ ಸಭಾಭವನದ ಎದುರು) ಪಂದ್ಯಾವಳಿ ನಡೆಯಲಿದೆ. ಹಿರಿಯ ಪೈಲ್ವಾನರು ಮತ್ತು ನಿರ್ಣಾಯಕರ ಮಾರ್ಗದರ್ಶನದಲ್ಲಿ ಕುಸ್ತಿಗಳನ್ನು ಶಿಸ್ತಿನಿಂದ ನಡೆಸಲಾಗುವುದು ಎಂದು ತಿಳಿಸಿದರು.

ಕುಸ್ತಿ ಅಭಿಮಾನಿಗಳು, ದಾನಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಪಂದ್ಯಾವಳಿಯನ್ನು ಯಶಸ್ವಿಗೊಳಿಸುವಂತೆ ಅವರು ಮನವಿ ಮಾಡಿದರು.

ಸಭೆಯಲ್ಲಿ ಉಪಾಧ್ಯಕ್ಷ ಮಕ್ತುಂಸಾಬ ನಾಗನೂರ, ಕಾರ್ಯದರ್ಶಿ ಇಮಾಮಸಾಬ ರೋಣದ, ಖಜಾಂಚಿ ಶಂಕ್ರಪ್ಪ ಯರಗುಡಿ, ಕರ್ನಾಟಕ ರಾಜ್ಯ ಹಮಾಲರ ಒಕ್ಕೂಟದ ರಾಜ್ಯಾಧ್ಯಕ್ಷ ಅಯ್ಯಪ್ಪ ನಾಯ್ಕರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಚಿಂತ್ರಪಳ್ಳಿಯಲ್ಲಿ ಹುಲಿವೇಷ, ಅಚ್ಚಳ್ಳಿಗಳ ಮೆರಗು; ಭಕ್ತಿಭಾವದಿಂದ ನಡೆದ ದೇವರ ಮೆರವಣಿಗೆ

## ಹುಲಿವೇಷಗಳ ನಡುವೆ ಮೊಹರಂ ವೈಭವ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ಚಿಂತ್ರಪಳ್ಳಿ ಗ್ರಾಮದಲ್ಲಿ ಮೊಹರಂ ಹಬ್ಬದ ಕೊನೆಯ ದಿನದ ಆಚರಣೆ ಸಡಗರ, ಸಂಭ್ರಮ ಹಾಗೂ ಧಾರ್ಮಿಕ ಭಕ್ತಿಭಾವದೊಂದಿಗೆ ನೆರವೇರಿತು. ಗ್ರಾಮದ ಮಸೀದಿಯಿಂದ ಆರಂಭವಾದ ದೇವರ ಮೆರವಣಿಗೆ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಭಕ್ತರ ಗಮನ ಸೆಳೆಯಿತು.



ಮೆರವಣಿಗೆಯಲ್ಲಿ ಹುಲಿವೇಷಧಾರಿಗಳು, ಅಚ್ಚಳ್ಳಿಗಳು ಹಾಗೂ ಹಿಡಿಂಬ ವೇಷಧಾರಿಗಳು ದೇವರ ಮುಂಭಾಗದಲ್ಲಿ ಕುಣಿದು ಕುಪ್ಪಳಿಸುವ ಮೂಲಕ ಭಕ್ತಿಭಾವ ಮೆರೆದರು. ಕಹಳೆ, ಹಲಗೆ ಸೇರಿದಂತೆ ಸಾಂಪ್ರದಾಯಿಕ ತಾಳವಾದ್ಯಗಳ ನಿನಾದದ ನಡುವೆ ಮೆರವಣಿಗೆ ಸಾಗಿದ್ದು, ಗ್ರಾಮದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು.

ಮಹಿಳೆಯರು ಹಾಗೂ ಮಕ್ಕಳು ದೇವರ ಮೆರವಣಿಗೆಯ ಹಾದಿಯಲ್ಲಿ ನೀರು ಹಾಕಿ ತಮ್ಮ ಹರಕೆ ಸಲ್ಲಿಸುವ ಮೂಲಕ ಭಕ್ತಿ ಸಮರ್ಪಿಸಿದರು. ಮೊಹರಂ ಆಚರಣೆಯಲ್ಲಿ ಹಿಂದೂ-ಮುಸ್ಲಿಂ ಬಾಂಧವರು ಒಂದಾಗಿ ಭಾಗವಹಿಸಿ ಸೌಹಾರ್ದತೆ ಮತ್ತು ಭಾವೈಕ್ಯತೆಯ ಸಂದೇಶ ಸಾರಿದರು.

ಈ ಸಂದರ್ಭದಲ್ಲಿ ಮಸೀದಿ ಮುಖ್ಯಸ್ಥರಾದ ಹುಸೇನ್ ಸಾಬ್, ಹಸನ್ ಸಾಬ್, ಜಮಾಲ್ ಸಾಬ್, ಪುರಸಭೆ ಸದಸ್ಯ ಬಣಕಾರ್ ಸುರೇಶ್, ಗ್ರಾಮದ ಮುಖಂಡರಾದ ತಳವಾರ್ ಹುಲುಗಪ್ಪ, ನೇಕಾರ್ ಸುರೇಶ್, ಶೀಲಿ ಚನ್ನಪ್ಪ, ಗಂಗಾಧರ ಕೆ.ಎಂ., ಮರುಳನಗೌಡ ವಿ., ಬಾರಿಕರ ಮಾರುತಿ, ಎಂ. ಚಂದ್ರಶೇಖರ, ಬಾರಿಕರ ಶ್ರೀನಿವಾಸ, ಮುನಾಫ್ ಸಾಬ್, ಪಿಂಜಾರ್ ಸಕ್ರಪ್ಪ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## 450ನೇ ದಿನಕ್ಕೂ ನಿರಂತರ ಅನ್ನಸೇವೆ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಪಟ್ಟಣದ ರಾಮನಗರದ ದರ್ಶನ್ ಹೋಟೆಲ್ ಮಾಲೀಕ ಎಸ್.ಎಂ. ಗಂಗಾಧರಯ್ಯ ಹಾಗೂ ಅವರ ಆಪ್ತ ಸ್ನೇಹಿತರ ಬಳಗದಿಂದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯ ಒಳರೋಗಿಗಳಿಗೆ ಪ್ರತಿನಿತ್ಯ ನೀಡಲಾಗುತ್ತಿರುವ ಉಚಿತ ಉಪಹಾರ ಸೇವೆ 450ನೇ ದಿನವನ್ನು ಯಶಸ್ವಿಯಾಗಿ ಪೂರೈಸಿತು.

ಈ ಸಂದರ್ಭದಲ್ಲಿ ಆಸ್ಪತ್ರೆಯ 121 ಒಳರೋಗಿಗಳಿಗೆ ಉಚಿತ ಉಪಹಾರ ವಿತರಿಸಲಾಯಿತು. ಸೇವೆ ಆರಂಭವಾದ ನಂತರ ಒಂದೇ ದಿನದಲ್ಲಿ ಅತಿ ಹೆಚ್ಚು ರೋಗಿಗಳಿಗೆ ಉಪಹಾರ ವಿತರಿಸಿದ ದಿನ ಎಂಬ ವಿಶೇಷಕ್ಕೂ ಇದು ಸಾಕ್ಷಿಯಾಯಿತು.

2025ರ ಮಾರ್ಚ್ 31ರಂದು ಆರಂಭಗೊಂಡ ಈ ಸಮಾಜಮುಖಿ ಕಾರ್ಯವು ಸ್ನೇಹಿತರ ಸಹಕಾರದಿಂದ ನಿರಂತರವಾಗಿ ಸಾಗುತ್ತಿದ್ದು, ರೋಗಿಗಳು ಹಾಗೂ ಸಾರ್ವಜನಿಕರಿಂದ ಮೆಚ್ಚುಗೆಗೆ ಪಾತ್ರವಾಗಿದೆ. ದರ್ಶನ್ ಹೋಟೆಲ್ ಸಿಬ್ಬಂದಿಯೂ ಈ ಸೇವೆಯಲ್ಲಿ ಕೈಜೋಡಿಸುತ್ತಿದ್ದಾರೆ.

ಈ ಸಂದರ್ಭದಲ್ಲಿ ಸಿಎಂ ಶ್ರೀನಿವಾಸ್, ಸರ್ದಾರ್ ಯಮನೂರಪ್ಪ, ಪಾನ್‌ಶಾಪ್ ಪುಟ್ಟಣ್ಣ, ಆಟೋ ವೀರೇಶ್, ಮಡಿವಾಳರ ಅಶೋಕ್, ಸೆರಗಾರ್ ಪರಶುರಾಮ್ ಹಾಗೂ ಹೋಟೆಲ್ ಸಿಬ್ಬಂದಿ ಉಪಸ್ಥಿತರಿದ್ದರು.



## ಭಾವೈಕ್ಯದ ಸಂದೇಶ ಸಾರಿದ ಸಂಭ್ರಮದ ಮೊಹರಂ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಹಿಂದೂ-ಮುಸ್ಲಿಂ ಭಾವೈಕ್ಯದ ಸಂಕೇತವಾದ ಮೊಹರಂ ಹಬ್ಬವನ್ನು ಹಜರತ್ ಇಮಾಮ್ ಹಸನ್-ಹುಸೇನ್ ಅವರ ತ್ಯಾಗ ಮತ್ತು ಬಲಿದಾನದ ಸ್ಮರಣಾರ್ಥ ಮುಳಗುಂದ ಪಟ್ಟಣದಲ್ಲಿ ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು.

ಪಟ್ಟಣದ ವಿವಿಧ ಮಸೀದಿಗಳಿಂದ ಪೀರ್ ದೇವರುಗಳ ಮೆರವಣಿಗೆ ಹೆಜ್ಜೆಮೇಳದೊಂದಿಗೆ ಪ್ರಮುಖ ಬೀದಿಗಳಲ್ಲಿ ಸಂಚರಿಸಿತು.

ದಾವಲ್ ಮಲಿಕ್ ದೇವರ ಬೇಟಿ ವೇಳೆ ಸಾವಿರಾರು ಹಿಂದೂ-ಮುಸ್ಲಿಂ ಬಾಂಧವರು ಭಕ್ತಿಭಾವದಿಂದ ದರ್ಶನ ಪಡೆದು ಆಶೀರ್ವಾದ ಪಡೆದರು.

ಬಳಿಕ ಭಕ್ತರು ದಾವಲ್ ಮಲಿಕ್ ಗುಡ್ಡಕ್ಕೆ ತೆರಳಿ ವಿಶೇಷ ಪೂಜೆ ಸಲ್ಲಿಸಿದರು. ಮೊಹರಂ ಆಚರಣೆ ಧಾರ್ಮಿಕ ಸೌಹಾರ್ದತೆ ಹಾಗೂ ಸಾಮರಸ್ಯದ ಸಂದೇಶವನ್ನು ಸಾರಿತು.

### ಸಿದ್ಧಾರೂಢ ಮಠದಲ್ಲಿ ವಿಧಿವತ್ತಾಗಿ ಚಾಲನೆ-ಸ್ಥಳೀಯ ಪ್ರತಿಭೆಗಳಿಗೆ ವೇದಿಕೆ ಕಲ್ಪಿಸುವ ಭರವಸೆ

# ಬೆಳ್ಳಿತೆರೆಗೆ 'ಏನಾಯಿತು' ಪಯಣ ಆರಂಭ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ವಿಸ್ಮಯ ವೆಂಚರ್ಸ್ ನಿರ್ಮಾಣದ 'ಏನಾಯಿತು' ಕನ್ನಡ ಚಲನಚಿತ್ರದ ಮುಹೂರ್ತ ಹಾಗೂ ಚಿತ್ರೀಕರಣಕ್ಕೆ ಹುಬ್ಬಳ್ಳಿಯ ಸಿದ್ಧಾರೂಢ ಮಠದಲ್ಲಿ ಚಾಲನೆ ನೀಡಲಾಯಿತು.



ಕಾರ್ಯಕ್ರಮದಲ್ಲಿ ಕ್ಯಾಮೆರಾ ಚಾಲನೆ ನೀಡಿ ಮಾತನಾಡಿದ ಸ್ವರ್ಣ ಗ್ರೂಪ್ ಕಂಪನಿಯ ವ್ಯವಸ್ಥಾಪಕ ನಿರ್ದೇಶಕ ಡಾ. ಸಿ.ಎಚ್.ವಿ.ಎಸ್.ವಿ. ಪ್ರಸಾದ್, "ಉತ್ತರ ಕರ್ನಾಟಕದಲ್ಲಿ ಹೆಚ್ಚು ಸಿನಿಮಾಗಳು ನಿರ್ಮಾಣವಾಗಬೇಕು. ಇಲ್ಲಿನ ಕಲಾವಿದರು ಮತ್ತು ತಂತ್ರಜ್ಞರಿಗೆ ಹೆಚ್ಚಿನ ಅವಕಾಶಗಳು ದೊರೆಯಬೇಕು. ಉತ್ತಮ ಸದಭಿರುಚಿಯ ಚಿತ್ರಗಳು ಸಮಾಜಕ್ಕೆ ಅಗತ್ಯ" ಎಂದು ಹೇಳಿದರು.

ಸಿದ್ಧಾರೂಢ ಮಠ ಟ್ರಸ್ಟ್ ಅಧ್ಯಕ್ಷ ಬಾಳು ಮಗಜಿಕೊಂಡಿ ಕ್ಲಾಪ್ ಮಾಡಿ ಮಾತನಾಡಿ, "ಇಡೀ ಕುಟುಂಬ ಕುಳಿತು ನೋಡುವ ಹಾಗೂ ಸಮಾಜಕ್ಕೆ ಉತ್ತಮ ಸಂದೇಶ ನೀಡುವ ಚಲನಚಿತ್ರಗಳು ನಿರ್ಮಾಣವಾಗಲಿ" ಎಂದು ಹಾರೈಸಿದರು.

> "ಉತ್ತರ ಕರ್ನಾಟಕದಲ್ಲಿ ಹೆಚ್ಚು ಸಿನಿಮಾಗಳು ನಿರ್ಮಾಣವಾಗಿ, ಇಲ್ಲಿನ ಕಲಾವಿದರು ಮತ್ತು ತಂತ್ರಜ್ಞರಿಗೆ ಹೆಚ್ಚಿನ ಅವಕಾಶಗಳು ದೊರೆಯಬೇಕು."
>
> – ಡಾ. ಸಿ.ಎಚ್.ವಿ.ಎಸ್.ವಿ. ಪ್ರಸಾದ್

ಕಾರ್ಯಕ್ರಮದಲ್ಲಿ ಎವಿಕೆ ಫೌಂಡೇಶನ್‌ನ ವೆಂಕಟೇಶ್ ಕಾಟವೆ, ಹಿರಿಯ ಕವಿ ಮಹಾಂತಪ್ಪ ನಂದೂರ್, ಡಾ. ರಾಮು ಮುಲಗಿ, ನಾಯಕ ನಟ ಈಶಾನ್ ರಘುರಾಜನ್, ನಟಿ ಚೈತ್ರ ತೋಟದ್, ನಿರ್ದೇಶಕ ತಮನ್ನಾ, ಚಲನಚಿತ್ರ ಪತ್ರಕರ್ತ ಹಾಗೂ ಪಿಆರ್‌ಒ ಡಾ. ಪ್ರಭು ಗಂಜಿಹಾಳ, ಡಾ. ವೀರೇಶ ಹಂಡಿಗಿ, ವಿನಾಯಕ ಶೆಟ್ಟಿ, ನವೀನ ಪಾಟೀಲ ಜೈನ್, ರಾಘು ಬುಧಪನವರ್, ಕೃಷ್ಣ ಉಲ್ಲಿಕಾಶಿ ಸೇರಿದಂತೆ ಚಿತ್ರತಂಡದ ಸದಸ್ಯರು ಉಪಸ್ಥಿತರಿದ್ದರು.

ಚಿತ್ರಕ್ಕೆ ಗೌರಿ ವೆಂಕಟೇಶ ಛಾಯಾಗ್ರಹಣ, ಡಾ. ಶೈಲಜಾ ಶರ್ಮ ಕಥೆ, ಈಶಾನ್ ರಘುರಾಜನ್ ಸಾಹಿತ್ಯ, ಸಂಭಾಷಣೆ ಹಾಗೂ ಚಿತ್ರಕಥೆ, ವಿ. ಮನೋಹರ ಸಂಗೀತ ನೀಡಿದ್ದು, ತಮನ್ನಾ ನಿರ್ದೇಶನ ಮಾಡುತ್ತಿದ್ದಾರೆ. ಹುಬ್ಬಳ್ಳಿ-ಧಾರವಾಡ ಸುತ್ತಮುತ್ತ ಚಿತ್ರೀಕರಣ ನಡೆಯಲಿದ್ದು, ಉತ್ತರ ಕರ್ನಾಟಕದ ಕಲಾವಿದರಿಗೆ ಹೆಚ್ಚಿನ ಅವಕಾಶ ಕಲ್ಪಿಸಲಾಗುವುದು ಎಂದು ನಿರ್ದೇಶಕರು ತಿಳಿಸಿದ್ದಾರೆ.

## ಜಿಲ್ಲಾ ಮಟ್ಟದ ಯೋಗ ಸ್ಪರ್ಧೆ: ವಿಜೇತರಿಗೆ ಬಹುಮಾನ ವಿತರಣೆ



■ವಿಜಯಸಾಕ್ಷಿ ಸುದ್ದಿ, ಗದಗ

12ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಶಿವಾನುಭವ ಮಂಟಪದಲ್ಲಿ ಆಯೋಜಿಸಿದ್ದ ಜಿಲ್ಲಾ ಮಟ್ಟದ ಯೋಗ ನಿಬಂಧ ಹಾಗೂ ಯೋಗಾಸನ ಸಮೂಹ ನೃತ್ಯ ಸ್ಪರ್ಧೆಗಳ ಫಲಿತಾಂಶ ಪ್ರಕಟಿಸಲಾಗಿದೆ.

ಯೋಗ ನಿಬಂಧ ಸ್ಪರ್ಧೆಯಲ್ಲಿ ಸುನಂದಾ ಜ್ಞಾನೋಪಂತರ ಹಾಗೂ ಸುಲೋಚನಾ ಐಹೊಳೆ ಪ್ರಥಮ, ಗೀತಾ ಹೂಗಾರ ದ್ವಿತೀಯ, ಮಲ್ಲಯ್ಯ ಕಲಹಾಳ ತೃತೀಯ ಸ್ಥಾನ ಪಡೆದರೆ, ರೋಜಾ ಮುಗಳಿ ಸಮಾಧಾನಕರ ಬಹುಮಾನ ಪಡೆದರು.

ಯೋಗಾಸನ ಸಮೂಹ ನೃತ್ಯ ಸ್ಪರ್ಧೆಯಲ್ಲಿ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ (ಸಿದ್ಧಲಿಂಗನಗರ, ಗದಗ) ಪ್ರಥಮ, ನಿತ್ಯಂ ಯೋಗ ಕೇಂದ್ರ ದ್ವಿತೀಯ ಹಾಗೂ ಬಸವೇಶ್ವರ ಹಿರಿಯ ಪ್ರಾಥಮಿಕ ಶಾಲೆ ತೃತೀಯ ಸ್ಥಾನ ಗಳಿಸಿತು.

ಸ್ಪರ್ಧೆಯಲ್ಲಿ ಯೋಗ ನಿಬಂಧ ವಿಭಾಗದಲ್ಲಿ 24 ಹಾಗೂ ಯೋಗಾಸನ ಸಮೂಹ ನೃತ್ಯ ವಿಭಾಗದಲ್ಲಿ 49 ಸ್ಪರ್ಧಿಗಳು ಭಾಗವಹಿಸಿದ್ದರು. ವಿಜೇತರಿಗೆ ನಗದು ಬಹುಮಾನ, ಪ್ರಶಸ್ತಿ ಪತ್ರ ಹಾಗೂ ಪದಕಗಳನ್ನು ನೀಡಿ ಗೌರವಿಸಲಾಯಿತು.

ಕಾರ್ಯಕ್ರಮವನ್ನು ಎಸ್. ವೈ.ಬಿ.ಎಂ.ಎಸ್. ಯೋಗಪಾಠಶಾಲೆಯ ಬಸವ ಯೋಗ ಮಹಾವಿದ್ಯಾಲಯ, ಲಿಂಗಾಯತ ಪ್ರಗತಿಶೀಲ ಸಂಘ, ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಹಾಗೂ ಜಿಲ್ಲಾ ಯೋಗ ಒಕ್ಕೂಟದ ಸಹಯೋಗದಲ್ಲಿ ಆಯೋಜಿಸಲಾಗಿತ್ತು ಎಂದು ಸ್ಪರ್ಧೆಗಳ ಸಂಯೋಜಕ ಕೆ.ಎಸ್. ಪಲ್ಲೇದ ತಿಳಿಸಿದ್ದಾರೆ.

### ಬಲ್ಲಾಹುಣ್ಸಿಯಲ್ಲಿ ವಿವಿಧ ಜಿಲ್ಲೆಗಳ ಪೈಲ್ವಾನರ ಸೆಣಸಾಟ

## ಮೊಹರಂ ಸಂಭ್ರಮಕ್ಕೆ ರಂಗೇರಿಸಿದ ಕುಸ್ತಿ ಕಾಳಗ!

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ಬಲ್ಲಾಹುಣ್ಸಿ ಗ್ರಾಮದಲ್ಲಿ ಮೊಹರಂ ಹಬ್ಬದ ಅಂಗವಾಗಿ ಆಯೋಜಿಸಿದ್ದ ವಾರ್ಷಿಕ ಕುಸ್ತಿ ಪಂದ್ಯಾವಳಿಗೆ ಪುರಸಭೆ ಸದಸ್ಯ ಪವಾಡಿ ಹನುಮಂತಪ್ಪ ಚಾಲನೆ ನೀಡಿದರು.



ಈ ಸಂದರ್ಭದಲ್ಲಿ ಮಾತನಾಡಿದ ಅವರು, ಕುಸ್ತಿ ಕೇವಲ ಕ್ರೀಡೆಯಲ್ಲ, ಅದು ಗ್ರಾಮೀಣ ಸಂಸ್ಕೃತಿ, ದೈಹಿಕ ಸಾಮರ್ಥ್ಯ ಹಾಗೂ ಶಿಸ್ತಿನ ಪ್ರತೀಕವಾಗಿದೆ. ಯುವಕರಲ್ಲಿ ಧೈರ್ಯ, ಆತ್ಮವಿಶ್ವಾಸ ಮತ್ತು ಆರೋಗ್ಯಕರ ಜೀವನಶೈಲಿಯನ್ನು ಬೆಳೆಸುವಲ್ಲಿ ಕುಸ್ತಿ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಹೇಳಿದರು.

ದಾವಣಗೆರೆ, ಹಾವೇರಿ, ಹೊಸಪೇಟೆ, ಕೊಪ್ಪಳ ಸೇರಿದಂತೆ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ಪೈಲ್ವಾನರು ಸುಮಾರು 15ರಿಂದ 20 ಕುಸ್ತಿಗಳಲ್ಲಿ ಸೆಣಸಾಡಿ ಪ್ರೇಕ್ಷಕರ ಮನರಂಜಿಸಿದರು. ಪರ್ಸಿ ಪೈಕಿ ಫೈನಲ್ ಕುಸ್ತಿಯಲ್ಲಿ ಶರತ್ (ರಾಣೆಬೆನ್ನೂರು) ಹಾಗೂ ವಿಜಯ (ಹರಿಹರ) ನಡುವಿನ ಸೆಣಸಾಟ ಸಮಬಲದಲ್ಲಿ ಅಂತ್ಯಗೊಂಡ ಕಾರಣ ಬೆಳ್ಳಿ ಗದೆ ಪ್ರಶಸ್ತಿ ಈ ಬಾರಿ ನೀಡಲಾಗಲಿಲ್ಲ.

ಕುಸ್ತಿ ಸ್ಪರ್ಧೆ ವೀಕ್ಷಿಸಲು ಸಾವಿರಾರು ಜನರು ಸೇರಿದ್ದು, ಕುಸ್ತಿ ಕಣ ರೋಚಕ ಪೈಪೋಟಿಗೆ ಸಾಕ್ಷಿಯಾಯಿತು. ಪ್ರತಿವರ್ಷ ಕುಸ್ತಿಪಟುಗಳಿಗೆ ಧನಸಹಾಯ ಹಾಗೂ ಸಾರಿಗೆ ಭತ್ಯೆ ನೀಡಿ ಪ್ರೋತ್ಸಾಹಿಸುತ್ತಿರುವ ಗ್ರಾಮಸ್ಥರ ಸೇವೆಯನ್ನು ಅವರು ಶ್ಲಾಘಿಸಿದರು.

ಕಾರ್ಯಕ್ರಮದಲ್ಲಿ ಕೆ. ಮೈಲಾರಪ್ಪ, ದೊಡ್ಡ ಬಸಪ್ಪ, ಡಿಶ್ ಮಂಜುನಾಥ್, ಶಿಖಂದರ್, ಇಮ್ತಿಯಾಜ್, ಪೈಂಟರ್ ಬಾಬು, ಕೆ. ಹುಚ್ಚಪ್ಪ, ಬಲ್ಲಾಹುಣ್ಸಿ ರಾಮಣ್ಣ, ಸಾಹಿರಾಬಾನು, ಎಣ್ಣೆ ದಾದು ಸೇರಿದಂತೆ ಹಲವರು ಉಪಸ್ಥಿತರಿದ್ದರು. ನಿರ್ಣಾಯಕರಾಗಿ ಫಾಜಿಲ್ ಸಾಬ್, ಶಾನುಭೋಗರ ತಿಪ್ಪಣ್ಣ, ಶಾನುಭೋಗರ ನಾಗರಾಜ್, ಬಿಸ್ನಳ್ಳಿ ಕರೀಂಸಾಬ್ ಹಾಗೂ ಪೂಜಾರ್ ಮಂಜುನಾಥ್ ಕಾರ್ಯನಿರ್ವಹಿಸಿದರು.

# ಎಸ್‌ಐಆರ್ ವಿರುದ್ಧ ಜನಜಾಗೃತಿ ಅಗತ್ಯ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಭಾರತ ಚುನಾವಣಾ ಆಯೋಗ ಕೈಗೊಂಡಿರುವ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದು ಅಂಜುಮನ್ ಇಸ್ಲಾಂ ಕಮಿಟಿಯ ಮಾಜಿ ಕಾರ್ಯದರ್ಶಿ ಹಾಗೂ ನ್ಯಾಯವಾದಿ ದಾವಲಸಾಬ ತಾಳಿಕೋಟಿ ಹೇಳಿದರು.



ಸಮೀಪದ ವದೇಗೋಳ ಗ್ರಾಮದಲ್ಲಿ ಆಯೋಜಿಸಿದ್ದ ಎಸ್‌ಐಆರ್ ಜನಜಾಗೃತಿ ಸಭೆಯಲ್ಲಿ ಮಾತನಾಡಿದ ಅವರು, ಎಸ್‌ಐಆರ್ ಪ್ರಕ್ರಿಯೆ ಕುರಿತು ತಮ್ಮ ಆತಂಕಗಳನ್ನು ವ್ಯಕ್ತಪಡಿಸಿದರು. ಈ ಪ್ರಕ್ರಿಯೆಯ ಮೂಲಕ ನಾಗರಿಕರ ಹಕ್ಕುಗಳಿಗೆ ಧಕ್ಕೆ ಉಂಟಾಗುವ ಸಾಧ್ಯತೆ ಇದೆ ಎಂದು ಆರೋಪಿಸಿದರು.

ಮತದಾರರ ಪಟ್ಟಿ ಪರಿಷ್ಕರಣೆ ನೆಪದಲ್ಲಿ ಸಾರ್ವಜನಿಕರಿಂದ ಸುಲಭವಾಗಿ ಲಭ್ಯವಾಗದ ದಾಖಲೆಗಳನ್ನು ಕೇಳಿ ಸಂಕಷ್ಟಕ್ಕೆ ಸಿಲುಕಿಸುವ ಪ್ರಯತ್ನ ನಡೆಯುತ್ತಿದೆ. ಇದು ಕೇವಲ ಮತದಾರರ ಪಟ್ಟಿ ಪರಿಷ್ಕರಣೆ ಮಾತ್ರವಲ್ಲ, ಎನ್‌ಆರ್‌ಸಿ ಮತ್ತು ಸಿಎಎ ಜಾರಿಯೊಂದಿಗೆ ಸಂಬಂಧ ಹೊಂದಿದೆ ಎಂಬ ತಮ್ಮ ಅಭಿಪ್ರಾಯವನ್ನು ಅವರು ವ್ಯಕ್ತಪಡಿಸಿದರು.

ಯಾರೊಬ್ಬರ ಮತದಾನದ ಹಕ್ಕೂ ಕಳೆದುಹೋಗದಂತೆ ಪ್ರತಿಯೊಬ್ಬರೂ ಜಾಗೃತರಾಗಬೇಕು ಹಾಗೂ ಒಗ್ಗಟ್ಟಿನಿಂದ ಈ ಸವಾಲನ್ನು ಎದುರಿಸಬೇಕು ಎಂದು ಕರೆ ನೀಡಿದರು.

ಅಂಜುಮನ್ ಇಸ್ಲಾಂ ಕಮಿಟಿಯ ಕಾರ್ಯದರ್ಶಿ ಮಾಸುಮಲಿ ಮದಗಾರ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ವದೇಗೋಳ ಅಧ್ಯಕ್ಷ ಮಾಬುಸಾಬ ಮಕಾನದಾರ, ಎ.ಕೆ. ಕಾತರಕಿ, ನಾಸೀರ್ ಅಲಿ ಸುರಪುರ, ಖಾಸಿಂಸಾಬ ಸುಂಕದ, ಮಕ್ತುಸಾಬ್ ಮಕಾನದಾರ, ಭಾಷೆಸಾಬ್ ಮುಲ್ಲಾ, ಅಕ್ತಾರಾಹುಸೇನ್ ಜಿಲಿಬಿಲಿ, ಪರಿಮಸಾಬ್ ಮಕಾನದಾರ, ಮುರ್ತುಜಾ ಜೂಲಕಟ್ಟಿ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

ಲಕ್ಷ್ಮೇಶ್ವರದಲ್ಲಿ 'ಸ್ವಾಸ್ಥ್ಯ ಸಂಕಲ್ಪ' ಕಾರ್ಯಕ್ರಮದಲ್ಲಿ ಮೀನಾಕ್ಷಿ ಮಟ್ಟಿ ಅಭಿಮತ

# ದುಶ್ಚಟ ಮುಕ್ತ ಸಮಾಜಕ್ಕೆ ವಿದ್ಯಾರ್ಥಿಗಳೇ ಶಕ್ತಿ



"ದುಶ್ಚಟ ಮುಕ್ತ ಸಮಾಜ ನಿರ್ಮಾಣದಲ್ಲಿ ವಿದ್ಯಾರ್ಥಿಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ, ಮಾದಕ ವ್ಯಸನದಿಂದ ದೂರವಿರುವ ಸಂಕಲ್ಪ ಪ್ರತಿಯೊಬ್ಬರೂ ಮಾಡಬೇಕು."
–ಮೀನಾಕ್ಷಿ ಮಟ್ಟಿ, ಎಎಸ್ಐ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮಾದಕ ವಸ್ತುಗಳ ವ್ಯಸನದಿಂದ ಮಕ್ಕಳ ಆರೋಗ್ಯ, ಕುಟುಂಬ ಹಾಗೂ ಸಮಾಜದ ಸ್ವಾಸ್ಥ್ಯ ಹದಗೆಡುತ್ತಿದ್ದು, ದುಶ್ಚಟ ಮುಕ್ತ ಸಮಾಜ ನಿರ್ಮಾಣದಲ್ಲಿ ವಿದ್ಯಾರ್ಥಿಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಲಕ್ಷ್ಮೇಶ್ವರ ಪೊಲೀಸ್ ಠಾಣೆಯ ಎಎಸ್ಐ ಮೀನಾಕ್ಷಿ ಮಟ್ಟಿ ಹೇಳಿದರು.

ಪಟ್ಟಣದ ಸರ್ಕಾರಿ ಪ್ರೌಢಶಾಲೆಯಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಆಯೋಜಿಸಿದ್ದ 'ಸ್ವಾಸ್ಥ್ಯ ಸಂಕಲ್ಪ' ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಉತ್ತಮ ಮೌಲ್ಯಗಳು ಮತ್ತು ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸಿಕೊಳ್ಳಬೇಕು. ಪೋಕ್ಸೋ ಕಾಯ್ದೆ, ಬಾಲ್ಯ ವಿವಾಹ ನಿಷೇಧ ಕಾಯ್ದೆ ಹಾಗೂ ಲೈಂಗಿಕ ದೌರ್ಜನ್ಯ ತಡೆ ಕಾಯ್ದೆಗಳ ಬಗ್ಗೆ ಅರಿವು ಹೊಂದುವುದು ಅಗತ್ಯ ಎಂದರು.

ಯೋಜನೆಯ ಮೇಲ್ವಿಚಾರಕ ನಿಂಗಪ್ಪ ಪಾಟೀಲ ಮಾತನಾಡಿ, ಪೂಜ್ಯ ಡಾ. ಡಿ. ವೀರೇಂದ್ರ ಹೆಗ್ಗಡೆಯವರ ಮಾರ್ಗದರ್ಶನದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಮೂಲಕ ಮದ್ಯವರ್ಜನ ಶಿಬಿರ, ಜ್ಞಾನ ವಿಕಾಸ ಹಾಗೂ ವಿವಿಧ ಸಮಾಜಮುಖಿ ಕಾರ್ಯಕ್ರಮಗಳನ್ನು ನಿರಂತರವಾಗಿ ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಮುಖ್ಯೋಪಾಧ್ಯಾಯ ಬಿ.ಸಿ. ಪಟ್ಟೇದ ಮಾತನಾಡಿ, ಮಕ್ಕಳಲ್ಲಿ ಬಾಲ್ಯದಿಂದಲೇ ದುಶ್ಚಟಗಳ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸಬೇಕು ಎಂದರು.

ಈ ಸಂದರ್ಭದಲ್ಲಿ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

ಶಿಕ್ಷಕರು, ಸೇವಾಪ್ರತಿನಿಧಿಗಳು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಮುಂಗಾರು ಕೈಕೊಟ್ಟ ಆತಂಕ– ಸಾಲ ಮಾಡಿ ಬಿತ್ತಿದ ಬೆಳೆ ಉಳಿಸಿಕೊಳ್ಳಲು ರೈತರ ಹರಸಾಹಸ, ಗುರ್ಜಿ ಪೂಜೆಯ ಮೊರೆ!

# ಮಳೆಗಾಗಿ ಮುಗಿಲಿನತ್ತ ರೈತರ ಚಿತ್ತ..!

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಮುಂಗಾರು ಮಳೆ ಕೈಕೊಟ್ಟ ಪರಿಣಾಮ ಶಿರಹಟ್ಟಿ ತಾಲೂಕಿನ ರೈತರಲ್ಲಿ ಆತಂಕ ಮನೆ ಮಾಡಿದೆ. ಮುಂಗಾರು ಪೂರ್ವ ಸುರಿದ ಮಳೆಯನ್ನು ನಂಬಿ ರೈತರು ಹೈಬ್ರಿಡ್ ಜೋಳ, ಗೋವಿನ ಜೋಳ, ತೊಗರಿ, ಹೆಸರು, ಶೇಂಗಾ ಸೇರಿದಂತೆ ವಿವಿಧ ಬೆಳೆಗಳ ಬಿತ್ತನೆ ಪೂರ್ಣಗೊಳಿಸಿದ್ದರು. ಆದರೆ ನಂತರ ಸಮರ್ಪಕ ಮಳೆಯಾಗದ ಕಾರಣ ಮೊಳಕೆಯೊಡೆದ ಬೆಳೆಗಳು ಒಣಗಲಾರಂಭಿಸಿದ್ದು, ರೈತರು ದಿನವೂ ಮುಗಿಲಿನತ್ತ ದೃಷ್ಟಿ ನೆಟ್ಟಿದ್ದಾರೆ.

ಕೆಲವೆಡೆ ಅಲ್ಪ ಪ್ರಮಾಣದ ಮಳೆಯಾದರೂ ಕೃಷಿ ಭೂಮಿಗೆ ತೇವಾಂಶ ಒದಗಿಸುವಷ್ಟು ಸುರಿಯುತ್ತಿಲ್ಲ. ಇನ್ನೊಂದೆಡೆ ಬಿತ್ತನೆ ಮಾಡದ ರೈತರು ಮಳೆಯ ನಿರೀಕ್ಷೆಯಲ್ಲೇ ಕಾಯುತ್ತಿದ್ದು, ಬಿತ್ತನೆ ಅವಧಿ ಕೈತಪ್ಪುವ ಆತಂಕ



ಎದುರಿಸುತ್ತಿದ್ದಾರೆ. ಕಳೆದ ವರ್ಷವೂ ಮಳೆ ವೈಪರೀತ್ಯದಿಂದ ನಷ್ಟ ಅನುಭವಿಸಿದ್ದ ರೈತರು, ಈ ವರ್ಷವೂ ಸಾಲ ಮಾಡಿ ಬೀಜ ಮತ್ತು ಗೊಬ್ಬರ ಖರೀದಿಸಿ ಬಿತ್ತನೆ ನಡೆಸಿದ್ದಾರೆ. ಇದೀಗ ಮಳೆ ವಿಳಂಬವಾಗಿರುವುದು ಅವರ ಸಂಕಷ್ಟವನ್ನು ಮತ್ತಷ್ಟು ಹೆಚ್ಚಿಸಿದೆ.

"ಈಗಾಗಲೇ ಬಿತ್ತನೆ ಮಾಡಿದ ರೈತರು 19-19-19 ಹಾಗೂ ರಂಜಕ ಗೊಬ್ಬರ ಸಿಂಪಡಿಸಿ ಎಡೆ ಹೊಡೆಯಬೇಕು. ಹೊಸದಾಗಿ ಬಿತ್ತನೆ ಮಾಡುವವರು ಮಳೆಯಾದ ಬಳಿಕ ತೇವಾಂಶ ಪರಿಶೀಲಿಸಿ ಬಿತ್ತನೆ ಮಾಡಬೇಕು."
– ಶಿವಕುಮಾರ ಕಾಶಪ್ಪನವರ, ಸಹಾಯಕ ಕೃಷಿ ನಿರ್ದೇಶಕರು

ಮಳೆಗಾಗಿ ಶಿರಹಟ್ಟಿ ಪಟ್ಟಣ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಗುರ್ಜಿ ಪೂಜೆ ಸೇರಿದಂತೆ ಸಾಂಪ್ರದಾಯಿಕ ಪೂಜೆ–ಪುನಸ್ಕಾರಗಳು ನಡೆಯುತ್ತಿವೆ. ಉತ್ತಮ ಮಳೆಯಾಗಿ ಬೆಳೆಗಳು ಉಳಿಯಲಿ ಎಂಬ ಆಶಯದಿಂದ ರೈತರು ವರುಣನ ಮೊರೆ ಹೋಗುತ್ತಿದ್ದಾರೆ. ಕೃಷಿಯನ್ನೇ ಜೀವನಾಧಾರವಾಗಿಸಿಕೊಂಡಿರುವ ಕುಟುಂಬಗಳಲ್ಲಿ ಅನಿಶ್ಚಿತತೆಯ ವಾತಾವರಣ ನಿರ್ಮಾಣವಾಗಿದೆ.

ಈ ಕುರಿತು ಪ್ರತಿಕ್ರಿಯಿಸಿದ ಸಹಾಯಕ ಕೃಷಿ ನಿರ್ದೇಶಕ ಶಿವಕುಮಾರ ಕಾಶಪ್ಪನವರ, ಈಗಾಗಲೇ ಬಿತ್ತನೆ ಮಾಡಿದ ರೈತರು ಬೆಳೆ ಸಂರಕ್ಷಣೆಗೆ ಸೂಕ್ತ ಕ್ರಮ ಕೈಗೊಳ್ಳಬೇಕು. ಹೊಸದಾಗಿ ಬಿತ್ತನೆ ಮಾಡುವವರು ಮಳೆಯಾದ ನಂತರವೇ ತೇವಾಂಶ ಪರಿಶೀಲಿಸಿ ಬಿತ್ತನೆ ಮಾಡುವುದು ಒಳಿತು ಎಂದು ಸಲಹೆ ನೀಡಿದರು.

# ಗವಾಯಿಗಳ ಮಠಕ್ಕೆ ಜಾತಿ– ಧರ್ಮ ಇಲ್ಲ

**■ವಿಜಯಸಾಕ್ಷಿ ಸುದ್ದಿ, ಗದಗ**

ಸಾಮಾಜಿಕ ಕಾರ್ಯಕರ್ತ ಹಾಗೂ ಕಾಂಗ್ರೆಸ್ ಮುಖಂಡ ಸೈಯದ್ ಖಾಲಿದ್ ಕೊಪ್ಪಳ ಅವರು ಗದಗದ ವೀರೇಶ್ವರ ಪುಣ್ಯಾಶ್ರಮಕ್ಕೆ ಭೇಟಿ ನೀಡಿ ಶ್ರೀ ಡಾ. ಕಲ್ಲಯ್ಯಜ್ಜನವರನ್ನು ಭೇಟಿಯಾಗಿ ಆರೋಗ್ಯ ವಿಚಾರಿಸಿದರು.

ಬಳಿಕ ಮಾತನಾಡಿದ ಅವರು, ಡಾ. ಪಂಡಿತ್ ಪುಟ್ಟರಾಜ ಕವಿ ಗವಾಯಿಗಳ ಮಠವು ಜಾತಿ–ಧರ್ಮದ ಭೇದವಿಲ್ಲದೆ ಎಲ್ಲರನ್ನು ಒಗ್ಗೂಡಿಸಿದ ಜಾತ್ಯಾತೀತ ಮಠವಾಗಿದೆ. ಅಂಧರು ಹಾಗೂ ಅನಾಥರಿಗೆ ಶಿಕ್ಷಣ ನೀಡಿ ಬದುಕು ಕಟ್ಟಿಕೊಟ್ಟ ಈ ಮಠದ ಸೇವೆ ಸಮಾಜಕ್ಕೆ ಮಾದರಿಯಾಗಿದೆ



ಎಂದು ಹೇಳಿದರು.

ಈ ಸಂದರ್ಭದಲ್ಲಿ ಹಿರಿಯ ಪತ್ರಕರ್ತ ಬಸವರಾಜ ದಂಡಿನ್, ಫಾರೂಕ್ ಸಿಂದಗಿ, ಉಸ್ಮಾನ್ ಮಳಕೊಪ್ಪ, ಅಕ್ಬರ್ ಅತ್ತಾರ್, ಸುರೇಶ್ ಮಾಗಡಿ, ಇಬ್ರಾಹಿಂ ಅತ್ತಾರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಗ್ರಾಮೀಣ ಭಾಗಕ್ಕೆ ಬಸ್ ಸೇವೆ ವಿಸ್ತರಿಸಲು ಒತ್ತಾಯ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಲಕ್ಷ್ಮೇಶ್ವರದಿಂದ ಬೂದಿಹಾಳ–ಕೊಕ್ಕರಗೊಂದಿ ಮಾರ್ಗವಾಗಿ ಗುತ್ತಲವರೆಗೆ ಹೊಸ ಬಸ್ ಸೇವೆ ಆರಂಭಿಸುವಂತೆ ಆಗ್ರಹಿಸಿ ಕರ್ನಾಟಕ ರೈತ ಸಂಘ ಹಾಗೂ ಹಸಿರು ಸೇನೆ, ತಾಲ್ಲೂಕು ಹಿರಿಯ ನಾಗರಿಕರು ಮತ್ತು ನಿವೃತ್ತ ನೌಕರರ ಸಂಘದ ಪದಾಧಿಕಾರಿಗಳು ಸಾರಿಗೆ ಘಟಕದ ವ್ಯವಸ್ಥಾಪಕಿ ಸವಿತಾ ಆದಿ ಅವರಿಗೆ ಶನಿವಾರ ಮನವಿ ಸಲ್ಲಿಸಿದರು.

ಕರ್ನಾಟಕ ರೈತ ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ ಸಿ.ಆರ್. ಲಕ್ಕುಂಡಿಮಠ ಮಾತನಾಡಿ, ಗುತ್ತಲ, ಬೆಳ್ಳಟ್ಟಿ, ಹಾವನೂರು ಸೇರಿದಂತೆ ಹಲವು ಗ್ರಾಮಗಳ ಜನರು ಪ್ರತಿದಿನ ಲಕ್ಷ್ಮೇಶ್ವರಕ್ಕೆ ಬರುತ್ತಿದ್ದು, ಸಮರ್ಪಕ ಬಸ್ ವ್ಯವಸ್ಥೆ ಇಲ್ಲದ ಕಾರಣ ವಿದ್ಯಾರ್ಥಿಗಳು, ಮಹಿಳೆಯರು, ಹಿರಿಯ ನಾಗರಿಕರು ಹಾಗೂ ರೋಗಿಗಳು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಆದ್ದರಿಂದ ಶೀಘ್ರ ಬಸ್ ಸೇವೆ ಆರಂಭಿಸಬೇಕು ಎಂದು ಒತ್ತಾಯಿಸಿದರು. ಹಿರಿಯ ಸದಸ್ಯ ಚಂಬಣ್ಣ ಬಾಳಿಕಾಯಿ ಮಾತನಾಡಿ, ಲಕ್ಷ್ಮೇಶ್ವರ–ಹಾವನೂರು–ಗುತ್ತಲ ಹಾಗೂ ಬೂದಿಹಾಳ–ಕೊಕ್ಕರಗೊಂದಿ, ನಾಗರಮಡುವು–ಬಿಜ್ಜೂರು–ಕೊಂಚಿಗೇರಿ ಮಾರ್ಗಗಳಲ್ಲೂ ಬಸ್‌ಗಳನ್ನು ಓಡಿಸುವಂತೆ ಆಗ್ರಹಿಸಿದರು.

ಈ ಸಂದರ್ಭದಲ್ಲಿ ಐ.ಎಸ್. ಮಡಿವಾಳರ, ಸೂಗೀರಪ್ಪ ವಾಲಿ ಹಾಗೂ ಈರಣ್ಣ ಉಮಚಗಿ ಉಪಸ್ಥಿತರಿದ್ದರು.

ಮಾಡಳ್ಳಿಯಲ್ಲಿ ಪುಟಾಣಿಗಳಿಗೆ ಅಕ್ಷರಾಭ್ಯಾಸ, ಎಲ್‌ಕೆಜಿ–ಯುಕೆಜಿ ಮಕ್ಕಳಿಗೆ ಅದ್ಧೂರಿ ಸ್ವಾಗತ

# ಅಂಗನವಾಡಿಯಲ್ಲೂ 'ವೆಲ್‌ಕಂ ಡೇ' ಸಂಭ್ರಮ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಮಾಡಳ್ಳಿ ಗ್ರಾಮದ ಅಂಗನವಾಡಿ ಕೇಂದ್ರ–36ರಲ್ಲಿ ಪುಟಾಣಿ ಮಕ್ಕಳಿಗೆ ಅಕ್ಷರಾಭ್ಯಾಸ, 'ವೆಲ್‌ಕಂ ಡೇ' ಹಾಗೂ ಎಲ್‌ಕೆಜಿ–ಯುಕೆಜಿ ಪ್ರವೇಶೋತ್ಸವವನ್ನು ಸಂಭ್ರಮದಿಂದ ಆಚರಿಸಲಾಯಿತು.

ಹೊಸ ಬಟ್ಟೆ ತೊಟ್ಟು ಪೋಷಕರೊಂದಿಗೆ ಆಗಮಿಸಿದ ಮಕ್ಕಳನ್ನು ಆರತಿ ಬೆಳಗಿ, ಕಾಣಿಕೆ ನೀಡಿ ಸ್ವಾಗತಿಸಲಾಯಿತು. ಬಳಿಕ ಗಣೇಶ ಹಾಗೂ ಶಾರದಾ ಮಾತೆಯ ಪೂಜೆ ನೆರವೇರಿಸಿ ಮಕ್ಕಳಿಗೆ ಅಕ್ಷರಾಭ್ಯಾಸ ಮಾಡಿಸಲಾಯಿತು. ಎಲ್‌ಕೆಜಿ ಹಾಗೂ ಯುಕೆಜಿಗೆ ದಾಖಲಾದ ಮಕ್ಕಳಿಗೆ ಇದೇ ವೇಳೆ ಪಠ್ಯಪುಸ್ತಕಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಯೋಜನಾಧಿಕಾರಿ ಮೃತ್ಯುಂಜಯ ಜಿ., ಅಂಗನವಾಡಿಗಳಲ್ಲಿ ಎಲ್‌ಕೆಜಿ–ಯುಕೆಜಿ ಆರಂಭಿಸಿರುವುದರಿಂದ



ಖಾಸಗಿ ಶಾಲೆಗಳ ಮಾದರಿಯಲ್ಲೇ ಗುಣಮಟ್ಟದ ಶಿಕ್ಷಣ, ಪೌಷ್ಟಿಕ ಆಹಾರ ಹಾಗೂ ಮಕ್ಕಳ ಸರ್ವಾಂಗೀಣ ಬೆಳವಣಿಗೆಗೆ ಅಗತ್ಯ ತರಬೇತಿ ನೀಡಲಾಗುತ್ತಿದೆ. ಪೋಷಕರು ಮಕ್ಕಳನ್ನು ಅಂಗನವಾಡಿಗೆ ದಾಖಲಿಸಿ ಸರ್ಕಾರದ ಯೋಜನೆಗಳ ಸದುಪಯೋಗ ಪಡೆಯಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಮೇಲ್ವಿಚಾರಕಿ ಶಿಲ್ಪಾ ಹೊಸಮಠ, ರಮಜಾನ್‌ಸಾಬ ನದಾಫ್, ದಾವಲಸಾಬ ನದಾಫ್, ನಿವೃತ್ತ ಶಿಕ್ಷಕ ಹನುಮಂತಪ್ಪ ಸರವಿ, ಅಂಗನವಾಡಿ ಕಾರ್ಯಕರ್ತೆ ಈರಮ್ಮ ಅಂಗಡಿ, ಸಹಾಯಕಿ ಸವಿತಾ ಸರವಿ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಬಳಿಕ ಮಕ್ಕಳಿಂದ ವಿವಿಧ ಆಟೋಟಗಳು ನಡೆಯಿತು.

"ಅಂಗನವಾಡಿಗಳಲ್ಲೂ ಖಾಸಗಿ ಶಾಲೆಗಳ ಮಾದರಿಯ ಗುಣಮಟ್ಟದ ಶಿಕ್ಷಣ ನೀಡಲಾಗುತ್ತಿದೆ."
– ಮೃತ್ಯುಂಜಯ ಜಿ.

# ಕೆಸರಿನ ಸಂಪ್ರದಾಯದಲ್ಲಿ ಮೆರೆದ ಮೊಹರಂ ಭಾವೈಕ್ಯ



**■ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ತಿಮ್ಮಾಪೂರ ಗ್ರಾಮದಲ್ಲಿ ಹಿಂದೂ–ಮುಸ್ಲಿಂ ಸೌಹಾರ್ದತೆಯ ಸಂಕೇತವಾದ ಮೊಹರಂ ಹಬ್ಬವನ್ನು ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು.

ಹಜರತ್ ಇಮಾಮ್ ಹುಸೇನ್ ಅವರ ತ್ಯಾಗ ಮತ್ತು ಬಲಿದಾನವನ್ನು ಸ್ಮರಿಸುವ ಅಂಗವಾಗಿ ಗ್ರಾಮದಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಲಾಯಿತು. ಮೊಹರಂ ಅಂಗವಾಗಿ ಪೀರರ ಮೆರವಣಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ, ಅಲೈ ದೇವರಿಗೆ ಪೂಜೆ ಸಲ್ಲಿಸಲಾಯಿತು.

ತಿಮ್ಮಾಪೂರದ ವಿಶೇಷ ಸಂಪ್ರದಾಯದಂತೆ ಯುವಕರು ಅಗ್ನಿಕುಂಡದ ಸಮೀಪ ನೀರು ಸುರಿದು ಕೆಸರು ಮಾಡಿ ಅದರಲ್ಲಿ ಆಡುವ ಮೂಲಕ ದಶಕಗಳಿಂದ ನಡೆದುಕೊಂಡು ಬಂದಿರುವ ಆಚರಣೆಯನ್ನು ಮುಂದುವರಿಸಿದರು. ಈ ವಿಶಿಷ್ಟ ಸಂಪ್ರದಾಯವನ್ನು ನೋಡಲು ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಸೇರಿದ್ದರು.

ಮೊಹರಂ ಆಚರಣೆಯಲ್ಲಿ ಹಿಂದೂ–ಮುಸ್ಲಿಂ ಬಾಂಧವರು ಯಾವುದೇ ಭೇದಭಾವವಿಲ್ಲದೆ ಒಂದಾಗಿ ಪಾಲ್ಗೊಂಡು ಭಾವೈಕ್ಯತೆ ಮೆರೆದರು.

# ವೃದ್ಧಾಶ್ರಮದಲ್ಲಿ ಸೀರೆ ವಿತರಿಸಿ ಸಂಸ್ಥಾಪನಾ ದಿನ ಆಚರಣೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಹಿಂದೂ ಜನಜಾಗೃತಿ ಸಮಿತಿಯ 23ನೇ ಸಂಸ್ಥಾಪನಾ ದಿನದ ಅಂಗವಾಗಿ ಪಟ್ಟಣದ ಜಿ.ಎಫ್. ಉಪನಾಳ ಟ್ರಸ್ಟ್‌ನ ಶಾಂತಿಧಾಮ ವೃದ್ಧಾಶ್ರಮದಲ್ಲಿ ಹಿರಿಯ ನಾಗರಿಕರಿಗೆ ಸೀರೆ ವಿತರಿಸುವ ಮೂಲಕ ವಿಶಿಷ್ಟವಾಗಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಸಮಿತಿಯ ಮುಖಂಡರು, ಹಿಂದೂ ಜನಜಾಗೃತಿ ಸಮಿತಿಯು ಕಳೆದ 23 ವರ್ಷಗಳಿಂದ ಧರ್ಮನಿಷ್ಠೆ,




ಸಮಾಜಮುಖಿ ಚಿಂತನೆ ಹಾಗೂ ಸೇವಾ ಕಾರ್ಯಗಳ ಮೂಲಕ ಜನಜಾಗೃತಿ ಮೂಡಿಸುತ್ತಿದೆ. ದೇಶದಾದ್ಯಂತ ವಿವಿಧ ಸಾಮಾಜಿಕ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಜನರ ಸಮಸ್ಯೆಗಳಿಗೆ ಸ್ಪಂದಿಸುತ್ತಾ ರಾಷ್ಟ್ರಭಕ್ತಿ ಮತ್ತು ಸಾಮಾಜಿಕ ಬದ್ಧತೆಯೊಂದಿಗೆ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದರು.

ವೃದ್ಧಾಶ್ರಮ ಟ್ರಸ್ಟ್ ಅಧ್ಯಕ್ಷ ಪ್ರಕಾಶ ಉಪನಾಳ ಸಮಿತಿಯ ಸದಸ್ಯರನ್ನು ಸ್ವಾಗತಿಸಿದರು.

ಕಾರ್ಯಕ್ರಮದಲ್ಲಿ ಸಮಿತಿಯ ಕಾರ್ಯಕರ್ತರಾದ ಭುವನೇಶ್ವರಿ ರೋಣದ, ಮಾಲಾ ತಹಸೀಲ್ದಾರ, ಚಂದ್ರಮತಿ ಇಟಗಿಮಠ, ಸುಮಾ ಕುಂಬಾರ ಹಾಗೂ ವೃದ್ಧಾಶ್ರಮದ ಸಿಬ್ಬಂದಿ ಉಪಸ್ಥಿತರಿದ್ದರು.

# ಮೊಹರಂ ಸಂಭ್ರಮಕ್ಕೆ ಭಾವೈಕ್ಯದ ಮೆರುಗು

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಹಿಂದು–ಮುಸ್ಲಿಂ ಭಾವೈಕ್ಯದ ಪ್ರತೀಕವಾದ ಮೊಹರಂ ಹಬ್ಬದ ಕೊನೆಯ ದಿನದ ಅಂಗವಾಗಿ ನರೇಗಲ್ಲ ಪಟ್ಟಣ ಸೇರಿದಂತೆ ಹೋಬಳಿಯ ವಿವಿಧ ಗ್ರಾಮಗಳಲ್ಲಿ ಶುಕ್ರವಾರ ಶ್ರದ್ಧಾಭಕ್ತಿಯಿಂದ ಮೊಹರಂ ಆಚರಿಸಲಾಯಿತು.

ಕೋಡಿಕೊಪ್ಪ, ಅಬ್ಬಿಗೇರಿ, ಕುರಡಗಿ, ಗುಜಮಾಗಡಿ, ಯರೇಬೇಲೇರಿ, ಡಿ.ಎಸ್. ಹಡಗಲಿ, ತೋಟಗಂಟಿ, ಬೂದಿಹಾಳ, ಜಕ್ಕಲಿ, ಮಾರನಬಸರಿ, ನಿಡಗುಂದಿ ಹಾಗೂ ನಿಡಗುಂದಿಕೊಪ್ಪ ಸೇರಿದಂತೆ ಹೋಬಳಿಯಾದ್ಯಂತ ಹಬ್ಬದ ಸಂಭ್ರಮ ಮನೆ



ಮಾಡಿತ್ತು.

ಪಟ್ಟಣದ ವಿವಿಧ ಮಸೀದಿಗಳಲ್ಲಿ ಪ್ರತಿಷ್ಠಾಪಿಸಿದ್ದ ಅಲಾಯಿ ದೇವರುಗಳು ಬೆಳಗ್ಗೆಯೇ ಸವಾರಿ ತೆರಳಿ ಗ್ರಾಮದೇವತೆ ದೇವಸ್ಥಾನದಲ್ಲಿ ದರುಶ ಪಡೆದು ಮರಳಿದವು. ಹೆಜ್ಜೆಮೇಳ, ಬ್ಯಾಂಡ್, ಹಲಗಿ ಸೇರಿದಂತೆ ವಿವಿಧ ವಾದ್ಯಗೋಷ್ಠಿಗಳೊಂದಿಗೆ ನಡೆದ ಮೆರವಣಿಗೆ ವಿಶೇಷ ಆಕರ್ಷಣೆಯಾಗಿತ್ತು.

ಸಂಜೆ ಅಲಂಕೃತಗೊಂಡ ಅಲಾಯಿ ದೇವರುಗಳು ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಿದ ವೇಳೆ ಸಾವಿರಾರು ಭಕ್ತರು ದರ್ಶನ ಪಡೆದು ಭಕ್ತಿ ಸಮರ್ಪಿಸಿದರು.

# ತ್ಯಾಗವೇ ಮೊಹರಂನ ಮಹಾ ಸಂದೇಶ

**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಮೊಹರಂ ಕೇವಲ ಒಂದು ಧಾರ್ಮಿಕ ಆಚರಣೆಯಲ್ಲ. ಅದು ಸತ್ಯ, ನ್ಯಾಯ, ತ್ಯಾಗ ಮತ್ತು ಮಾನವೀಯತೆಯ ಶಾಶ್ವತ ಸಂದೇಶ ಸಾರುವ ಪವಿತ್ರ ದಿನವಾಗಿದೆ ಎಂದು ಅಂಜುಮನ್ ಇಸ್ಲಾಂ ಸಂಸ್ಥೆಯ ಅಧ್ಯಕ್ಷ ತಾಜುದ್ದೀನ್ ಎಂ. ಕಿಂಡ್ರಿ ಹೇಳಿದರು.

ಮೊಹರಂ ಪ್ರಯುಕ್ತ ಶುಭಾಶಯಗಳನ್ನು ತಿಳಿಸಿ ಮಾತನಾಡಿದ ಅವರು, ಇಮಾಮ್ ಹುಸೇನ್ (ರ.ಅ) ಅವರ ತ್ಯಾಗ, ಧೈರ್ಯ ಮತ್ತು ನ್ಯಾಯಕ್ಕಾಗಿ ನಡೆಸಿದ ಹೋರಾಟವು ಇಡೀ ಮಾನವಕುಲಕ್ಕೆ ಆದರ್ಶವಾಗಿದೆ. ಅನ್ಯಾಯದ ಮುಂದೆ ತಲೆಬಾಗದೆ, ಸತ್ಯದ ಮಾರ್ಗದಲ್ಲಿ ಕೊನೆಯವರೆಗೂ ಅಚಲವಾಗಿ




ನಿಲ್ಲುವ ಸಂದೇಶವನ್ನು ಮೊಹರಂ ಸಾರುತ್ತದೆ ಎಂದು ಹೇಳಿದರು.

ಇಂದಿನ ಸಮಾಜದಲ್ಲಿ ಅನ್ಯಾಯ, ಅಸಮಾನತೆ ಮತ್ತು ಹಿಂಸಾಚಾರ ಹೆಚ್ಚುತ್ತಿರುವ ಸಂದರ್ಭದಲ್ಲಿ ಮೊಹರಂನ ಸಂದೇಶ ಇನ್ನಷ್ಟು ಪ್ರಸ್ತುತವಾಗಿದೆ. ಪ್ರತಿಯೊಬ್ಬರೂ ಸತ್ಯ, ನ್ಯಾಯ, ಸಹೋದರತ್ವ ಹಾಗೂ ಮಾನವೀಯ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಶಾಂತಿ ಮತ್ತು ಸೌಹಾರ್ದತೆಯ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಲಾಲಶಾಪೀರ್, ಮಕಾಂದರ್, ಜಾಫರ್ ಮೌಲಾನ, ಹಿರಿಯರಾದ ಇಮಾಮಸಾಬ್, ನದ್ದಿಮುಲ್ಲಾ, ಹಮೀದ್ ಮುಜಾವರ್, ಹೈದರಾಲಿ ಖವಾಸ್, ಮುನ್ನಾ ಢಾಲಾಯತ್, ದಾವುದ್ ಜವಾಲ್, ದಾವಲಸಾಬ್ ಲಕ್ಷ್ಮೇಶ್ವರ, ಇಮ್ಮಣ್ಣ ಕಿಂಡ್ರಿ, ರಾಜೇಸಾಬ್ ಸೈಯದ್‌ಬಡೆ, ಇಮಾಮ್ ಜಾಫರ್, ಲಾಡಸಾಬ್, ಮಾಬೂಸಾಬ್ ಅಬ್ಬುನವರ, ಮಹಬೂಬ್ ಅಲಿ ಶೇಖ್, ಹೈದರ್ ಶೇಖ್, ಮಹಮ್ಮದ್ ರಫಿ ಮುಲ್ಲಾ, ಖ್ವಾಜಾ ಕಿಚಡಿ ಹಾಗೂ ಸಲೀಂ ಫ್ಲೋರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ತಿಮ್ಮಾಪೂರ ಶಾಲೆಯಲ್ಲಿ 'ಗುರುಬ್ರಹ್ಮ' ಕಾರ್ಯಕ್ರಮ ಇಂದು



■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ತಿಮ್ಮಾಪೂರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಹಳೆ ವಿದ್ಯಾರ್ಥಿಗಳ ವತಿಯಿಂದ ಜೂನ್ 28ರಂದು ಬೆಳಿಗ್ಗೆ 11 ಗಂಟೆಗೆ ಶಾಲಾ ಆವರಣದಲ್ಲಿ 'ಗುರುಬ್ರಹ್ಮ' ಗುರು ವಂದನೆ, ಸ್ನೇಹ ಸಮ್ಮಿಲನ ಹಾಗೂ ನಿವೃತ್ತ ಶಿಕ್ಷಕರ ಸನ್ಮಾನ ಕಾರ್ಯಕ್ರಮ ಆಯೋಜಿಸಲಾಗಿದೆ.

ಕಾರ್ಯಕ್ರಮದಲ್ಲಿ ಸತತ 32 ವರ್ಷಗಳ ಕಾಲ ತಿಮ್ಮಾಪೂರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸೇವೆ ಸಲ್ಲಿಸಿ ಸಾವಿರಾರು ವಿದ್ಯಾರ್ಥಿಗಳ ಭವಿಷ್ಯ ರೂಪಿಸಿದ ಜೆ.ಜೆ. ಹೀರೆಹಾಳ ಅವರನ್ನು ವಿಶೇಷವಾಗಿ ಸನ್ಮಾನಿಸಲಾಗುತ್ತದೆ. ಜೊತೆಗೆ ಎಸ್.ಆರ್. ಕಲ್ಲೂರು, ಎಸ್.ಜಿ. ಕಲ್ಲಳ್ಳಿ, ಟಿ.ಎನ್. ಬಾಕಳೆ, ಪಿ.ಎನ್. ಅಡ್ನೂರು, ಪಟ್ಟೇದ, ಕಿಡಿಯಪ್ಪನವರ ಹಾಗೂ ಐ.ಕೆ. ಶಾಂತಗಿರಿ ಸೇರಿದಂತೆ ನಿವೃತ್ತ ಶಿಕ್ಷಕರಿಗೂ ಗುರು ವಂದನೆ ಸಲ್ಲಿಸಿ ಗೌರವಿಸಲಾಗುತ್ತದೆ.

ಅಕ್ಷರ ದಾಸೋಹ ಮಾಡಿದ ಗುರುಗಳ ಋಣ ತೀರಿಸುವ ಉದ್ದೇಶದಿಂದ ಹಳೆ ವಿದ್ಯಾರ್ಥಿಗಳು ಈ ಸ್ನೇಹ ಸಮ್ಮಿಲನವನ್ನು ಹಮ್ಮಿಕೊಂಡಿದ್ದು, ಎಲ್ಲ ಹಳೆ ವಿದ್ಯಾರ್ಥಿಗಳು, ಶಾಲೆಯ ಅಭಿಮಾನಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಹಳೆ ವಿದ್ಯಾರ್ಥಿಗಳ ಸಂಘ ಪ್ರಕಟಣೆಯಲ್ಲಿ ಕೋರಿದೆ.

### ರಾಮ ಮಂದಿರ ಕಾಣಿಕೆ ದುರ್ಬಳಕೆ ಪ್ರಕರಣದ ಕುರಿತು ಬಿಜೆಪಿ ವಿರುದ್ಧ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ವಾಗ್ದಾಳಿ

# ರಾಮನ ಹೆಸರಿನಲ್ಲಿ ಭಕ್ತರ ನಂಬಿಕೆ ಲೂಟಿ..!

■ ವಿಜಯಸಾಕ್ಷಿ ಸುದ್ದಿ, ಗದಗ

ರಾಮ ಮಂದಿರದ ಕಾಣಿಕೆ ದುರ್ಬಳಕೆ ಪ್ರಕರಣದಲ್ಲಿ ಬಿಜೆಪಿ ಸರ್ಕಾರ ಹಾಗೂ ಆಡಳಿತದ ವೈಫಲ್ಯ ಎದ್ದು ಕಾಣುತ್ತಿದ್ದು, ರಾಮನ ಹೆಸರಿನಲ್ಲಿ ಭಕ್ತರ ನಂಬಿಕೆಗೆ ದ್ರೋಹ ಎಸಗಲಾಗಿದೆ ಎಂದು ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಆರೋಪಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ರಾಮ ಮಂದಿರದ ಕಾಣಿಕೆ ಹಣ ಕೇವಲ ಲಕ್ಷಗಳಲ್ಲಿ ಅಲ್ಲ, ಸಾವಿರಾರು ಕೋಟಿ ರೂಪಾಯಿ ದುರ್ಬಳಕೆಯಾಗಿದೆ ಎಂಬ ಆರೋಪಗಳು ಕೇಳಿ ಬಂದಿವೆ. ರಾಮನ ಹೆಸರಿನಲ್ಲಿ ಭಕ್ತರಿಂದ ಸಂಗ್ರಹವಾದ ದೇಣಿಗೆಯನ್ನು ರಕ್ಷಿಸಲು ಬಿಜೆಪಿ ಸರ್ಕಾರ ಸಂಪೂರ್ಣ ವಿಫಲವಾಗಿದೆ ಎಂದು ಟೀಕಿಸಿದರು.

ರಾಮ ಮಂದಿರದ ಕಾಣಿಕೆ ನಿರ್ವಹಣೆಯಲ್ಲಿ ತೊಡಗಿದ್ದ ಸಿಬ್ಬಂದಿಗಳ ವಿರುದ್ಧ ಕೋಟ್ಯಂತರ ರೂಪಾಯಿ ಮೌಲ್ಯದ ಅಕ್ರಮ ಆಸ್ತಿ ಹೊಂದಿರುವ ಆರೋಪಗಳು ಕೇಳಿ ಬಂದಿವೆ. ರಾಮಶಂಕರ್ ಯಾದವ್ (ಟಿನ್ನು ಯಾದವ್), ಕೆ.ಡಿ. ತಿವಾರಿ, ಅನುಕಲ್ಪ ಮಿಶ್ರಾ, ಮನೀಶ್ ಯಾದವ್, ಲವಕುಶ್ ಮಿಶ್ರಾ ಹಾಗೂ ರಾಜೇಶ್ ಪಾಠಕ್ ಸೇರಿದಂತೆ ಹಲವರ ವಿರುದ್ಧ ತನಿಖೆ ನಡೆಯುತ್ತಿದ್ದು, ಅವರ ಆದಾಯಕ್ಕೆ ಮೀರಿದ ಆಸ್ತಿ ಮತ್ತು ನಗದು ಪತ್ತೆಯಾಗಿದೆ ಎಂದು ಪ್ರಕಟಣೆಯಲ್ಲಿ ಉಲ್ಲೇಖಿಸಿದ್ದಾರೆ.

2025ರ ಮಹಾಕುಂಭ ಮೇಳದ ಸಂದರ್ಭದಲ್ಲಿ

> "ರಾಮನ ಹೆಸರಿನಲ್ಲಿ ಭಕ್ತರ ನಂಬಿಕೆಯನ್ನು ದುರುಪಯೋಗಪಡಿಸಿಕೊಂಡಿರುವ ಆರೋಪಗಳಿಗೆ ಉತ್ತರ ನೀಡುವ ನೈತಿಕ ಹೊಣೆ ಬಿಜೆಪಿ ಮೇಲಿದೆ."
>
> – ಅಶೋಕ ಮಂದಾಲಿ, ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ



ಭಕ್ತರಿಂದ ಸಂಗ್ರಹವಾದ ಹಣದ ನಿರ್ವಹಣೆಯಲ್ಲಿ ಗಂಭೀರ ಲೋಪಗಳಾಗಿವೆ. ಕಾಣಿಕೆ ಪೆಟ್ಟಿಗೆಯಿಂದ ಬ್ಯಾಂಕ್‌ಗೆ ಹಣ ಸಾಗಿಸುವ ವೇಳೆ ಜಿಪಿಎಸ್ ವ್ಯವಸ್ಥೆ ಅಥವಾ ಸಮರ್ಪಕ ಭದ್ರತಾ ಕ್ರಮಗಳನ್ನು ಅನುಸರಿಸದಿರುವುದು ಹಾಗೂ ಕೋಟ್ಯಂತರ ರೂಪಾಯಿ ನಗದು ನಿರ್ವಹಿಸುವ ಸಿಬ್ಬಂದಿಗೆ ಸೂಕ್ತ ಭದ್ರತಾ ನಿಯಮಗಳನ್ನು ಜಾರಿಗೊಳಿಸದಿರುವುದು ಈ ಹಗರಣಕ್ಕೆ ಕಾರಣವಾಗಿದೆ ಎಂದು ಆರೋಪಿಸಿದರು.

ಪ್ರಕರಣದ ತನಿಖೆಯಲ್ಲಿ ಮೇಲ್ಮಟ್ಟದ ಅಧಿಕಾರಿಗಳನ್ನು ರಕ್ಷಿಸಿ, ಕೆಳಹಂತದ ಸಿಬ್ಬಂದಿಯನ್ನು ಮಾತ್ರ ಹೊಣೆಗಾರರನ್ನಾಗಿ ಮಾಡುವ ಪ್ರಯತ್ನ ನಡೆಯುತ್ತಿದೆ. ಉತ್ತರ ಪ್ರದೇಶ ಸರ್ಕಾರದ ಆಡಳಿತದ ಮೂಗಿನ ಕೆಳಗೆಯೇ ಈ ಬೆಳವಣಿಗೆ ನಡೆದಿದ್ದು, ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು ಎಂದು ಅವರು ಆಗ್ರಹಿಸಿದರು.

**ಸ್ವತಂತ್ರ ತನಿಖೆಗೆ ಹಿಂಜರಿಕೆ ಏಕೆ?**

ಜೂನ್ 23, 2026ರಂದು ಎಸ್‌ಐಟಿ 150 ಪುಟಗಳ ವರದಿಯನ್ನು ಉತ್ತರ ಪ್ರದೇಶ ಗೃಹ ಇಲಾಖೆಗೆ ಸಲ್ಲಿಸಿದರೂ ಇದುವರೆಗೆ ಎಫ್‌ಐಆರ್ ದಾಖಲಾಗಿಲ್ಲ ಎಂದು ಅಶೋಕ ಮಂದಾಲಿ ಆರೋಪಿಸಿದ್ದಾರೆ. ವಿರೋಧ ಪಕ್ಷಗಳ ವಿರುದ್ಧ ತನಿಖಾ ಸಂಸ್ಥೆಗಳನ್ನು ಬಳಸುವ ಬಿಜೆಪಿ, ಈ ಪ್ರಕರಣದಲ್ಲಿ ಸುಪ್ರೀಂ ಕೋರ್ಟ್ ಉಸ್ತುವಾರಿಯ ಸ್ವತಂತ್ರ ತನಿಖೆಗೆ ಒಪ್ಪಿಕೊಳ್ಳದಿರುವುದು ಏಕೆ ಎಂದು ಅವರು ಪ್ರಶ್ನಿಸಿದ್ದಾರೆ.

ಅಲ್ಲದೆ, ವಿರೋಧ ಪಕ್ಷಗಳ ವಿರುದ್ಧ ಸಿಬಿಐ ಹಾಗೂ ಇಡಿ ತನಿಖೆಗೆ ಒತ್ತಾಯಿಸುವ ಬಿಜೆಪಿ, ಈ ಪ್ರಕರಣದಲ್ಲಿ ಸುಪ್ರೀಂ ಕೋರ್ಟ್ ಉಸ್ತುವಾರಿಯ ಸ್ವತಂತ್ರ ತನಿಖೆಗೆ ಹಿಂಜರಿಯುತ್ತಿರುವುದು ಅನುಮಾನಗಳಿಗೆ ಎಡೆಮಾಡಿಕೊಡುತ್ತಿದೆ ಎಂದು ಆರೋಪಿಸಿದರು.

## ಲಕ್ಕುಂಡಿಯಲ್ಲಿ ಶ್ರದ್ಧಾಭಕ್ತಿಯಿಂದ ಮೊಹರಂ ಆಚರಣೆ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ತ್ಯಾಗ ಮತ್ತು ಬಲಿದಾನದ ಸಂಕೇತವಾದ ಮೊಹರಂ ಹಬ್ಬವನ್ನು ಲಕ್ಕುಂಡಿಯಲ್ಲಿ ಹಿಂದೂ-ಮುಸ್ಲಿಂ ಬಾಂಧವರು ಶ್ರದ್ಧಾಭಕ್ತಿಯಿಂದ ಆಚರಿಸುವ ಮೂಲಕ ಧಾರ್ಮಿಕ ಸೌಹಾರ್ದತೆ ಹಾಗೂ ಭಾವೈಕ್ಯತೆ ಮೆರೆದರು.



ಪಟ್ಟಣದ ಆರು ಮಸೀದಿಗಳಲ್ಲಿ ಪ್ರತಿಷ್ಠಾಪಿಸಿದ್ದ ಪಾಂಜಾ ಮತ್ತು ಡೋಲಿ ದೇವರನ್ನು ಶುಕ್ರವಾರ ಮುಂಜಾನೆ ಬಜಾರ ರಸ್ತೆಯಲ್ಲಿ ಹೆಜ್ಜೆಮೇಳದೊಂದಿಗೆ ಮೆರವಣಿಗೆ ಮಾಡಲಾಯಿತು. ನದಾಫ್ ಗಲ್ಲಿ, ಲಾಲಶಾವಲಿ ಹಾಗೂ ಅಂಬೇಡ್ಕರ್ ನಗರದ ಯುವಕರ ಹೆಜ್ಜೆಮೇಳಗಳು ವಿಶೇಷ ಆಕರ್ಷಣೆಯಾಗಿದ್ದವು.

ಮೆರವಣಿಗೆ ವೇಳೆ ಹಸನ್-ಹುಸೇನರ ತ್ಯಾಗ ಮತ್ತು ಶರಣರ ತತ್ವ ಸಾರುವ ಹಾಡುಗಳು ಮೊಳಗಿದವು. ಭಕ್ತರು ಪಾಂಜಾ ದೇವರಿಗೆ ನಮಿಸಿ ಸಂಕಲ್ಪ ಸಲ್ಲಿಸಿದರೆ, ಡೋಲಿ ದೇವರಿಗೆ ಬೆಲ್ಲದ ಅಚ್ಚು ಅರ್ಪಿಸಿದರು. ಬಳಿಕ ವಿರುಪಾಕ್ಷೇಶ್ವರ ದೇವಸ್ಥಾನದ ಸಮೀಪ ಪಾಂಜಾ ದೇವರುಗಳ ಸಂಗಮದೊಂದಿಗೆ ವಿಶೇಷ ಪ್ರಾರ್ಥನೆ ನೆರವೇರಿಸಲಾಯಿತು.

ಸಂದಲ್ ಹಾಗೂ ಕತ್ತಲ್ ರಾತ್ರಿಗಳಲ್ಲಿ ಅಗ್ನಿಕುಂಡ ಹಾಯುವ ಸಂಪ್ರದಾಯವೂ ಶ್ರದ್ಧಾಭಕ್ತಿಯಿಂದ ನಡೆಯಿತು. ಸಂಜೆ ಹಸನ್-ಹುಸೇನರ ಅಂತ್ಯಸಂಸ್ಕಾರದ ನೆನಪಿನ ಅಂಗವಾಗಿ ಪಾಂಜಾ ಮತ್ತು ಡೋಲಿ ದೇವರನ್ನು ಸಾಂಪ್ರದಾಯಿಕವಾಗಿ ದುರ್ಗಾದೇವಿ ಕೆರೆಯಲ್ಲಿ ಹೊಳೆಗೆ ಕಳುಹಿಸಲಾಯಿತು.

### ಜಿಲ್ಲಾ ಮಟ್ಟದ ಯೋಗಾಸನ ಸಮೂಹ ನೃತ್ಯ ಸ್ಪರ್ಧೆ ಉದ್ಘಾಟನೆ ಕಾರ್ಯಕ್ರಮದಲ್ಲಿ ಶೈಲಜಾ ತುಪ್ಪದ

# ಪ್ರತಿಭೆ ಗುರುತಿಸಿ ಪ್ರೋತ್ಸಾಹಿಸಲು ಸ್ಪರ್ಧೆಗಳು ಅಗತ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

"ಮಕ್ಕಳು, ಯುವಕರು ಹಾಗೂ ಹಿರಿಯರಲ್ಲಿ ಅಡಗಿರುವ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸಲು ಸ್ಪರ್ಧೆಗಳು ಉತ್ತಮ ವೇದಿಕೆಯಾಗಿವೆ.

ಸ್ಪರ್ಧೆಗಳಲ್ಲಿ ಭಾಗವಹಿಸುವುದರಿಂದ ಆತ್ಮವಿಶ್ವಾಸ ಬೆಳೆಯುವುದರ ಜೊತೆಗೆ ಪ್ರತಿಭೆಗೆ ಸೂಕ್ತ ಗೌರವ ದೊರೆಯುತ್ತದೆ" ಎಂದು ಕ್ಯಾಲಿಫೋರ್ನಿಯಾದ ಸಮಾಜ ಸೇವಾ ಇಲಾಖೆಯ ಇಂಜಿನಿಯರ್ ಶ್ರೀಮತಿ ಶೈಲಜಾ ತುಪ್ಪದ ಹೇಳಿದರು.




12ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಶಿವಾನುಭವ ಮಂಟಪದಲ್ಲಿ ಆಯೋಜಿಸಿದ್ದ ಜಿಲ್ಲಾ ಮಟ್ಟದ ಯೋಗಾಸನ ಸಮೂಹ ನೃತ್ಯ ಸ್ಪರ್ಧೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, "ತಾವು ವಿದ್ಯಾರ್ಥಿಯಾಗಿದ್ದಾಗ ಯೋಗಾಭ್ಯಾಸ ಮಾಡಿ ರಾಜ್ಯಮಟ್ಟದ ಯೋಗಾಸನ ಕ್ರೀಡಾಪಟುವಾಗಿದ್ದೆ. ಈಗ ವಿದೇಶದಲ್ಲಿಯೂ ಯೋಗ ಶಿಕ್ಷಕಿಯಾಗಿ ಸೇವೆ ಸಲ್ಲಿಸುತ್ತಿದ್ದು, ಯೋಗಕ್ಕೆ ವಿಶ್ವದಾದ್ಯಂತ ಗೌರವವಿದೆ. ಎಲ್ಲರೂ ನಿತ್ಯ ಯೋಗಾಭ್ಯಾಸ ರೂಢಿಸಿಕೊಳ್ಳಬೇಕು" ಎಂದು ಕರೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ರಾಜ್ಯ ಪ್ರಶಸ್ತಿ ಪುರಸ್ಕೃತ ನಿವೃತ್ತ ಶಿಕ್ಷಕ ಜಿ.ಪಿ. ಕಟ್ಟಿಮನಿ ಮಾತನಾಡಿ, ಪ್ರತಿಭಾವಂತ ವಿದ್ಯಾರ್ಥಿಗಳಿಂದ ಗುರುಗಳಿಗೆ ಸಮಾಜದಲ್ಲಿ ಇನ್ನಷ್ಟು ಗೌರವ ದೊರೆಯುತ್ತದೆ ಎಂದರು.

ವೇದಿಕೆಯಲ್ಲಿ ಜಿಲ್ಲಾ ಯೋಗ ಒಕ್ಕೂಟದ ಅಧ್ಯಕ್ಷ ಎಂ.ಎಸ್. ಶಿರಿಯಣ್ಣವರ, ಬಾಬಣ್ಣ ಗೋಟಡಕಿ, ಎಸ್.ಸಿ. ಹಿರೇಮಠ, ವಿದ್ಯಾ ಗಂಜಿಹಾಳ, ಸುಮಂಗಲಾ ಹದ್ಲಿ ಹಾಗೂ ಶಾಂತಾ ತುಪ್ಪದ ಉಪಸ್ಥಿತರಿದ್ದರು.

ಸುನಂದಾ ಜ್ಞಾನೋಪಂತರ ಯೋಗ ಪ್ರಾರ್ಥನೆ ನೆರವೇರಿಸಿದರು. ಎಂ.ವಿ. ಕಲಹಾಳ ಸ್ವಾಗತಿಸಿದರು. ಎಸ್.ಎಂ. ಬುರಡಿ ವಂದಿಸಿದರು. ಕೆ.ಎಸ್. ಪಲ್ಲೇದ ಕಾರ್ಯಕ್ರಮ ನಿರೂಪಿಸಿದರು.

## ಮಳೆಗಾಗಿ ಗುರ್ಜಿ ಹೊತ್ತ ರೈತ ಮಹಿಳೆಯರು



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಳೆ ಕೊರತೆಯಿಂದ ಕಂಗಾಲಾಗಿರುವ ರೈತರು ಉತ್ತಮ ಮಳೆಯಾಗಲೆಂದು ಲಕ್ಷ್ಮೇಶ್ವರ ತಾಲೂಕಿನ ಶಿಗ್ಲಿ ಗ್ರಾಮದಲ್ಲಿ ಶುಕ್ರವಾರ ಶ್ರೀ ದುರ್ಗಾಪರಮೇಶ್ವರಿ ದೇವಸ್ಥಾನದಲ್ಲಿ ಸಾಂಪ್ರದಾಯಿಕ ಗುರ್ಜಿ ಪೂಜೆ ನೆರವೇರಿಸಿದರು.

ಗ್ರಾಮದ ಮಹಿಳೆಯರು ತಲೆಯ ಮೇಲೆ ಗುರ್ಜಿ ಹೊತ್ತು, "ಗುರ್ಜಿ ಗುರ್ಜಿ ಎಲ್ಲಾಡಿ ಬಂದೆ... ಕಾರ ಮಳೆಯೋ, ಕಪ್ಪತ್ತ ಮಳೆಯೋ..." ಎಂದು ಜಾನಪದ ಹಾಡುಗಳನ್ನು ಹಾಡುತ್ತ ಮನೆ ಮನೆಗೆ ತೆರಳಿ ಮಳೆಗಾಗಿ ಪ್ರಾರ್ಥಿಸಿದರು.

ಸಗಣಿಯಿಂದ ತಯಾರಿಸಿದ ಗುರ್ಜಿಯನ್ನು ಹೆಂಚಿನ ಮೇಲೆ ಇಟ್ಟು ಗ್ರಾಮದ ಮನೆಗಳಿಗೆ ಕೊಂಡೊಯ್ಯಲಾಯಿತು. ಗುರ್ಜಿ ಮನೆ ಎದುರು ಬಂದಾಗ ಮನೆಯವರು ಹೆಂಚಿನ ಮೇಲೆ ನೀರು ಸುರಿದು ಮಳೆಯ ಸಂಕೇತವಾಗಿ ಪೂಜೆ ಸಲ್ಲಿಸಿ ದವಸ-ಧಾನ್ಯವನ್ನು ಕಾಣಿಕೆಯಾಗಿ ನೀಡಿದರು.

ಸಂಗ್ರಹವಾದ ದವಸ-ಧಾನ್ಯವನ್ನು ಮಾರಾಟ ಮಾಡಿ ಬಂದ ಹಣದಿಂದ ಚುರುಮರಿ ಖರೀದಿಸಿ ದೇವಸ್ಥಾನದಲ್ಲಿ ಎಲ್ಲರೂ ಪ್ರಸಾದ ಸ್ವೀಕರಿಸಿದರು. ಈ ಜಾನಪದ ಆಚರಣೆ ಗ್ರಾಮಸ್ಥರಲ್ಲಿ ಸಾಮರಸ್ಯ, ಸಹಕಾರ ಹಾಗೂ ಪ್ರಕೃತಿಯ ಮೇಲಿನ ಭಕ್ತಿಗೆ ಸಾಕ್ಷಿಯಾಯಿತು.

ಪೂಜೆಯಲ್ಲಿ ಬಸಪ್ಪ ಹಂಜಿ, ಶಿವಪ್ಪ ಕೆಸರಳ್ಳಿ, ರಾಜು ಮುಳಗುಂದ, ಎನ್.ಎನ್. ನೆಗಳೂರ, ಶ್ರೀಧರ ಜನಿವಾರದ, ವಿಷ್ಣಪ್ಪ ಮಾಳೋದಿ ಸೇರಿದಂತೆ ಅನೇಕ ಗ್ರಾಮಸ್ಥರು ಪಾಲ್ಗೊಂಡಿದ್ದರು.

### ಸರ್ಕಾರಿ ಪಪೂ ಕಾಲೇಜಿನಲ್ಲಿ ಉಚಿತ ಪಠ್ಯಪುಸ್ತಕ ವಿತರಣೆ ಕಾರ್ಯಕ್ರಮದಲ್ಲಿ ಎ.ಆರ್. ಮಲ್ಲನಗೌಡ್ರ ಅಭಿಮತ

# ಶಿಕ್ಷಣವೇ ಜೀವನದ ದೊಡ್ಡ ಸಂಪತ್ತು

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ವಿದ್ಯಾರ್ಥಿಗಳು ಸರ್ಕಾರದ ಶೈಕ್ಷಣಿಕ ಸೌಲಭ್ಯಗಳನ್ನು ಸಮರ್ಪಕವಾಗಿ ಬಳಸಿಕೊಂಡು ಉಜ್ವಲ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಕಾಲೇಜು ಅಭಿವೃದ್ಧಿ ಮಂಡಳಿ ಉಪಾಧ್ಯಕ್ಷ ಎ.ಆರ್. ಮಲ್ಲನಗೌಡ್ರ ಹೇಳಿದರು.

ಪಟ್ಟಣದ ಸರ್ಕಾರಿ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ ಉಚಿತ ಪಠ್ಯಪುಸ್ತಕ ವಿತರಣಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಗ್ರಾಮೀಣ ಭಾಗದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಆರ್ಥಿಕ ತೊಂದರೆಯಾಗದಂತೆ ಸರ್ಕಾರ ಹಲವು ಸೌಲಭ್ಯಗಳನ್ನು ನೀಡುತ್ತಿದ್ದು, ಅವುಗಳನ್ನು ಸದ್ಬಳಕೆ ಮಾಡಿಕೊಂಡು ಉನ್ನತ ಶಿಕ್ಷಣ ಪಡೆದು ಸಮಾಜಕ್ಕೆ ಕೊಡುಗೆ ನೀಡಬೇಕು ಎಂದು ಕರೆ ನೀಡಿದರು.



> "ಸರ್ಕಾರದ ಶೈಕ್ಷಣಿಕ ಸೌಲಭ್ಯಗಳನ್ನು ಸದ್ಬಳಕೆ ಮಾಡಿಕೊಂಡು ವಿದ್ಯಾರ್ಥಿಗಳು ಉಜ್ವಲ ಭವಿಷ್ಯ ರೂಪಿಸಿಕೊಳ್ಳಬೇಕು."
>
> – ಎ.ಆರ್. ಮಲ್ಲನಗೌಡ್ರ

ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯ ಬಸವರಾಜ ಪಲ್ಲೇದ ಮಾತನಾಡಿ, ಪಠ್ಯಪುಸ್ತಕಗಳು ಜ್ಞಾನ ಮತ್ತು ಮೌಲ್ಯಗಳ ಭಂಡಾರವಾಗಿದ್ದು, ಶಿಸ್ತು, ನಿರಂತರ ಅಧ್ಯಯನ ಹಾಗೂ ಕಠಿಣ ಪರಿಶ್ರಮದಿಂದ ಮಾತ್ರ ಗುರಿ ಸಾಧನೆ ಸಾಧ್ಯ ಎಂದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಎಸ್.ಸಿ. ಗುಳಗಣ್ಣವರ ಮಾತನಾಡಿ, ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಪೋಷಕರ ಸಹಕಾರವೂ ಅಗತ್ಯ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಗಣ್ಯರು ವಿದ್ಯಾರ್ಥಿಗಳಿಗೆ ಸಾಂಕೇತಿಕವಾಗಿ ಉಚಿತ ಪಠ್ಯಪುಸ್ತಕಗಳನ್ನು ವಿತರಿಸಿದರು. ದಾದಾಪೀರ ನದಾಫ, ಅನ್ನಪೂರ್ಣ ಸಂಕನಗೌಡ್ರ, ರಾಚಯ್ಯ ರೇಣುಕಮಠ, ವಿದ್ಯಾ ಜಕ್ಕಲಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಮಳೆ ಇಲ್ಲದೆ ಒಣಗುತ್ತಿರುವ ಜೋಳದ ಬೆಳೆ; ಜಾನುವಾರುಗಳಿಗಾಗಿ ಹರಸಾಹಸ

# ಮೇವು ಉಳಿಸಲು ಟ್ಯಾಂಕರ್ ಮೊರೆ ಹೋದ ರೈತ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಳೆ ಕೈಕೊಟ್ಟ ಪರಿಣಾಮ ರೈತರು ಸಂಕಷ್ಟಕ್ಕೆ ಸಿಲುಕಿದ್ದು, ಜಾನುವಾರುಗಳ ಮೇವು ಉಳಿಸಿಕೊಳ್ಳಲು ಲಕ್ಷ್ಮೇಶ್ವರದ ರೈತರೊಬ್ಬರು ಬಾಡಿಗೆ ಟ್ಯಾಂಕರ್ ಮೂಲಕ ನೀರುಣಿಸುವ ಅನಿವಾರ್ಯತೆಗೆ ಸಿಲುಕಿದ್ದಾರೆ.

ಪಟ್ಟಣದ ರೈತ ಪ್ರಕಾಶ ಮೇವುಂಡಿ ಅವರು ದನಕರುಗಳ ಮೇವಿಗಾಗಿ ಬಿತ್ತನೆ ಮಾಡಿದ್ದ ಜೋಳದ ಬೆಳೆ ಒಣಗದಂತೆ ಉಳಿಸಿಕೊಳ್ಳಲು ಟ್ಯಾಂಕರ್ ಮೂಲಕ ನೀರು ಹಾಕಿಸುತ್ತಿದ್ದಾರೆ. ಹೆಸರು, ಹತ್ತಿ ಸೇರಿದಂತೆ ಇತರೆ ಬೆಳೆಗಳು ಮಳೆ ಕೊರತೆಯಿಂದ ಒಣಗುತ್ತಿದ್ದರೂ, ಜಾನುವಾರುಗಳಿಗೆ ಮೇವು ಒದಗಿಸುವ ಜೋಳದ ಬೆಳೆಯನ್ನು ಮಾತ್ರ ಹೇಗಾದರೂ ಉಳಿಸಬೇಕೆಂಬ ಹಠದಿಂದ ಈ ಪ್ರಯತ್ನ ನಡೆಸುತ್ತಿದ್ದಾರೆ.



> "ನಾವು ಹೇಗಾದರೂ ಬದುಕುತ್ತೇವೆ; ಆದರೆ ನಮ್ಮ ಜಾನುವಾರುಗಳನ್ನು ಉಳಿಸಿಕೊಳ್ಳುವುದೇ ಈಗ ದೊಡ್ಡ ಸವಾಲಾಗಿದೆ."
>
> – ರೈತ ಪ್ರಕಾಶ ಮೇವುಂಡಿ

"ನಾವು ಹೇಗಾದರೂ ಬದುಕುತ್ತೇವೆ. ಆದರೆ ಜಾನುವಾರುಗಳ ರಕ್ಷಣೆಯೇ ದೊಡ್ಡ ಸವಾಲಾಗಿದೆ. ಕಳೆದ ವರ್ಷದ ಮೇವು ಬಹುತೇಕ ಖಾಲಿಯಾಗಿದೆ. ಈಗ ಜೋಳದ ಬೆಳೆ ಒಣಗಿದರೆ ದುಡ್ಡು ಕೊಟ್ಟರೂ ಮೇವು ಸಿಗುವುದಿಲ್ಲ. ಅದಕ್ಕಾಗಿ ಕಷ್ಟವಾದರೂ ಟ್ಯಾಂಕರ್ ಮೂಲಕ ನೀರು ಹಾಕಿಸಿ ಬೆಳೆ ಉಳಿಸಿಕೊಳ್ಳುತ್ತಿದ್ದೇನೆ" ಎಂದು ರೈತ ಪ್ರಕಾಶ ಮೇವುಂಡಿ ತಮ್ಮ ಅಳಲು ತೋಡಿಕೊಂಡರು.

ಮಳೆ ಕೊರತೆಯಿಂದ ರೈತರ ಆತಂಕ ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ಈ ದೃಶ್ಯ ಜಿಲ್ಲೆಯ ರೈತರ ಸಂಕಷ್ಟಕ್ಕೆ ಹಿಡಿದ ಕನ್ನಡಿಯಾಗಿದೆ.

### ನರೇಗಲ್ಲದಲ್ಲಿ ಉಚಿತ ಮೂಳೆ ಸಾಂದ್ರತೆ ತಪಾಸಣಾ ಶಿಬಿರ


# ಮೂಳೆ ಸವೆತ ನಿರ್ಲಕ್ಷಿಸಿದರೆ ಗಂಭೀರ ಸಮಸ್ಯೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಶ್ರೀ ಗುರುದತ್ತ ಕ್ಲಿನಿಕ್‌ನಲ್ಲಿ ಶುಕ್ರವಾರ ಉಚಿತ ಮೂಳೆ ಸವೆತ ಹಾಗೂ ಮೂಳೆ ಸಾಂದ್ರತೆ ತಪಾಸಣಾ ಶಿಬಿರ ನಡೆಯಿತು.

ಶಿಬಿರ ಉದ್ಘಾಟಿಸಿ ಮಾತನಾಡಿದ ಡಾ. ನಾಗರಾಜ ಗ್ರಾಮಪುರೋಹಿತ, ಮೂಳೆಗಳು ದೇಹದ ಪ್ರಮುಖ ಅಂಗವಾಗಿದ್ದು, ಅವುಗಳ ಆರೋಗ್ಯದ ಬಗ್ಗೆ ಪ್ರತಿಯೊಬ್ಬರೂ ಕಾಳಜಿ ವಹಿಸಬೇಕು ಎಂದರು.

ಆಸ್ಟಿಯೊಪೋರೋಸಿಸ್ (ಮೂಳೆ ಸವೆತ) ಗಂಭೀರ ಕಾಯಿಲೆಯಾಗಿದ್ದು, ಆರಂಭದಲ್ಲೇ ಪತ್ತೆಹಚ್ಚಿ ಸೂಕ್ತ ಚಿಕಿತ್ಸೆ ಪಡೆದರೆ ಮುಂದಿನ ತೊಂದರೆಗಳನ್ನು ತಪ್ಪಿಸಬಹುದು. ಬೆನ್ನುನೋವು, ದೇಹದ ಎತ್ತರ ಕಡಿಮೆಯಾಗುವುದು, ಬೆನ್ನು ಬಾಗುವುದು ಹಾಗೂ ಮೂಳೆ ಮುರಿತಗಳು ಇದರ ಪ್ರಮುಖ ಲಕ್ಷಣಗಳಾಗಿವೆ ಎಂದು ತಿಳಿಸಿದರು.



ಶಿಬಿರದಲ್ಲಿ ನೂರಕ್ಕೂ ಹೆಚ್ಚು ಮಂದಿ ತಪಾಸಣೆಗೆ ಒಳಗಾಗಿದ್ದು, ಇಂಡಾಸ್ ಕಂಪನಿಯ ತಂತ್ರಜ್ಞರು ವಿಶೇಷ ಯಂತ್ರದ ಮೂಲಕ ಮೂಳೆ ಸಾಂದ್ರತೆ ಮತ್ತು ಸವೆತ ಪರೀಕ್ಷೆ ನಡೆಸಿದರು. ಅಗತ್ಯವಿದ್ದವರಿಗೆ ಔಷಧೋಪಚಾರ ಹಾಗೂ ವೈದ್ಯಕೀಯ ಸಲಹೆ ನೀಡಲಾಯಿತು.

> "ಆಸ್ಟಿಯೊಪೋರೋಸಿಸ್ ಅನ್ನು ಆರಂಭದಲ್ಲೇ ಪತ್ತೆಹಚ್ಚಿ ಚಿಕಿತ್ಸೆ ಪಡೆದರೆ ಗಂಭೀರ ತೊಂದರೆಗಳನ್ನು ತಪ್ಪಿಸಬಹುದು."
>
> – ಡಾ. ನಾಗರಾಜ ಗ್ರಾಮಪುರೋಹಿತ

ಈ ಸಂದರ್ಭದಲ್ಲಿ ಹರಿ, ಹರೀಶ್ ಹಾಗೂ ನಿಖಿತಾ ಗ್ರಾಮಪುರೋಹಿತ ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka